ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೮

# ಪಟ್ಟಿ – ೨೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೇ ಅಧಿವೇಶನ
(ಮುಂದುವರೆದ ಉಪವೇಶನ)
ಸೋಮವಾರ, ದಿನಾಂಕ : ೧೩ನೇ ನವೆಂಬರ್, ೨೦೧೭

---

## ಸಮೂಹ – I

೧. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೨. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೩. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

೫. ವೈದ್ಯಕೀಯ ಶಿಕ್ಷಣ ಸಚಿವರು.

೬. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೭. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು.

---

## ಹೈದರಾಬಾದ್–ಕರ್ನಾಟಕ ಭಾಗದ ನಿರುದ್ಯೋಗಿ ಪದವೀಧರರಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಗುತ್ತಿಗೆ ಹೊರಗುತ್ತಿಗೆ ಆಧಾರದಲ್ಲಿ ನೇಮಕಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೫೭ (೩೪೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಹಾಗೂ ಅದರ ಅಧೀನದಲ್ಲಿರುವ ನಿಗಮ/ಸಂಸ್ಥೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ನಿರುದ್ಯೋಗಿ ವಿದ್ಯಾವಂತ ಪದವೀಧರರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆಯೇ; ಹಾಗಿದ್ದರೆ, ನೇಮಕ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿಯವರಿಗೆ ಸರ್ಕಾರ ನಿಗಧಿಪಡಿಸಿರುವ ವೇತನವೆಷ್ಟು; ಇವರಿಗೆ ಇತರೆ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

(ಇ) ಸದರಿಯವರಿಗೆ ವಿದ್ಯಾರ್ಹತೆಗೆ ತಕ್ಕಂತೆ ಯಾವ ಯಾವ ರೀತಿಯ ಹುದ್ದೆಗಳನ್ನು ನೀಡಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ? (ಹುದ್ದೆವಾರು ಮಾಹಿತಿ ನೀಡುವುದು)

## ಕಿಯೋನಿಕ್ಸ್ ಸಂಸ್ಥೆಯಿಂದ ಹೈದ್ರಾಬಾದ್–ಕರ್ನಾಟಕ ಭಾಗದ ನಿರುದ್ಯೋಗಿ ಪದವೀಧರರಿಗೆ ಗುತ್ತಿಗೆ/ಹೊರಗುತ್ತಿಗೆ ಆಧಾರದಲ್ಲಿ ಉದ್ಯೋಗ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೫೮ (೩೪೬೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಿಯೋನಿಕ್ಸ್ ಸಂಸ್ಥೆಯಿಂದ ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಎಷ್ಟು ನಿರುದ್ಯೋಗಿ ಪದವೀಧರರಿಗೆ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಸರ್ಕಾರಿ, ನಿಗಮ ಹಾಗೂ ಸಂಸ್ಥೆಗಳಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗಕ್ಕೆ ಇದುವರೆಗೆ ಕಿಯೋನಿಕ್ಸ್ ಸಂಸ್ಥೆಯು ಸರ್ಕಾರದಿಂದ ಪಡೆದ ಕೆಲಸಗಳು ಹಾಗೂ ಅನುದಾನ ಎಷ್ಟು; (೩ ವರ್ಷಗಳ ಮಾಹಿತಿ ನೀಡುವುದು)

(ಇ) ಸರ್ಕಾರಿ ಹಾಗೂ ಅರೆ ಸರ್ಕಾರಿ ಕಛೇರಿಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುವಾಗ ಕಿಯೋನಿಕ್ಸ್ ಸಂಸ್ಥೆಯು ಸರ್ಕಾರದಿಂದ ಪಡೆಯುವ ಮೊತ್ತ ಹಾಗೂ ಪದವೀಧರರಿಗೆ ನೀಡುವ ಕನಿಷ್ಠ ವೇತನವೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಕನ್ನಡ ಭಾಷೆ, ನೆಲ ಜಲ ಹಾಗೂ ಸಂಸ್ಕೃತಿ ಉಳಿಸಿ ಬೆಳೆಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೫೯ (೩೪೬೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಿಗೆ ೩ ವರ್ಷಗಳಲ್ಲಿ ಕನ್ನಡ ಭಾಷೆ, ನೆಲ, ಜಲ ಹಾಗೂ ಸಂಸ್ಕೃತಿ ಉಳಿಸಿ–ಬೆಳೆಸುವ ಚಟುವಟಿಕೆಗಳಿಗಾಗಿ ಯಾವ ಕಾರ್ಯಕ್ರಮ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿರುವ "ಕನ್ನಡ ಭವನ" ಗಳ ಸಂಖ್ಯೆ ಎಷ್ಟು; ಕಳೆದ ೨ ವರ್ಷಗಳಲ್ಲಿ ನಿರ್ಮಿಸಿರುವ ಭವನಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೈದರಾಬಾದ್–ಕರ್ನಾಟಕ ಭಾಗಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; ಹಮ್ಮಿಕೊಳ್ಳಲಾದ ಸಾಂಸ್ಕೃತಿಕ ಕಾರ್ಯಕ್ರಮಗಳಾವುವು? (ಜಿಲ್ಲಾವಾರು ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ "ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್" ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೯೬೦ (೩೪೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಬಹಳ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೊರತೆ ಇರುವ ಪ್ರದೇಶಗಳಾವುವು; (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಆ) ಈ ಭಾಗದಲ್ಲಿ ಜನರಿಗೆ ಸೂಕ್ತವಾದ ಚಿಕಿತ್ಸೆ ಇಲ್ಲದೆ ಮತ್ತು ನುರಿತ ತಜ್ಞ ವೈದರ ಕೊರತೆಯಿಂದ ಮಾರಣಾಂತಿಕ ಕಾಯಿಲೆಗಳ ನಿವಾರಣೆಗಾಗಿ ನೆರೆ ರಾಜ್ಯಕ್ಕೆ ಬಡರೋಗಿಗಳು ತೆರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ, ಕಡಿಮೆ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳನ್ನು ಹೆಚ್ಚಿಸಿ ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) "ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್" ಯೋಜನೆಯಡಿಯಲ್ಲಿ ಈ ಭಾಗಕ್ಕೆ ಹೆಚ್ಚು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಿ ಬಡ ರೋಗಿಗಳಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಮುಂದಾಗುವುದೇ? (ವಿವರ ನೀಡುವುದು)

## ಹೈದ್ರಾಬಾದ್-ಕರ್ನಾಟಕ ಭಾಗದಲ್ಲಿ ಮಂಜೂರಾದ ಹುದ್ದೆ ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೯೬೧ (೩೪೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೈದ್ರಾಬಾದ್-ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಒಟ್ಟು ಹುದ್ದೆಗಳೆಷ್ಟು; ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು ವೃಂದವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ನೇರ ನೇಮಕಾತಿ ಹಾಗೂ ಮುಂಬಡ್ತಿಗಾಗಿ ಮೀಸಲಿಟ್ಟ ಹುದ್ದೆಗಳೆಷ್ಟು; (ಇಲಾಖಾವಾರು ಹುದ್ದೆವಾರು ಮಾಹಿತಿ ನೀಡುವುದು)

(ಇ) ೩೭೧ (ಜೆ) ಅಡಿಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ಮೀಸಲಿಟ್ಟ ಹುದ್ದೆಗಳೆಷ್ಟು? (ಹುದ್ದೆವಾರು ಮಾಹಿತಿ ನೀಡುವುದು)

## ಮೊರಾರ್ಜಿ ವಸತಿ ಶಾಲೆಗಳಲ್ಲಿ ಸಂಗೀತ ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೯೬೧ (೩೩೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೊರಾರ್ಜಿ ವಸತಿ ಶಾಲೆಗಳಲ್ಲಿ ಸಂಗೀತ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲು ವಿಳಂಬ ಅನುಸರಿಸುತ್ತಿರಲು ಕಾರಣವೇನು;

(ಆ) ಈ ಶಾಲೆಗಳಲ್ಲಿ ಒಟ್ಟು ಖಾಲಿ ಇರುವ ಸಂಗೀತ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವುದು ಯಾವಾಗ;

(ಇ) ಖಾಲಿ ಇರುವ ಸಂಗೀತ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯ ಅನುಮೋದನೆ ದೊರೆತಿದೆಯೇ?

## ರಾಜ್ಯದಲ್ಲಿರುವ ಅನುಸೂಚಿತ ಜಾತಿ/ಅನುಸೂಚಿತ ಪಂಗಡಗಳ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೯೬೩ (೩೩೫೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಅನುಸೂಚಿತ ಜಾತಿ, ಅನುಸೂಚಿತ ಪಂಗಡ ಹಿಂದುಳಿದ ಪ್ರವರ್ಗಗಳಿಗೆ ಸೇರಿದ ಪ್ರತಿ ಜಾತಿ/ಪಂಗಡಗಳು ಯಾವುವು; ಅವುಗಳಿಗೆ ಒದಗಿಸಿದ ಶೈಕ್ಷಣಿಕ ಔದ್ಯೋಗಿಕ

ಮೀಸಲಾತಿ ಪ್ರವರ್ಗಗಳು ಯಾವುವು; (ಪ್ರತಿಯೊಂದರ ವಿವರ ನೀಡುವುದು) ನೀಡಿರುವ ಪ್ರತಿಶತ ಮೀಸಲಾತಿ ಪ್ರಮಾಣ ಎಷ್ಟು; (ವಿವರವಾದ ವಿವರಣೆಯ ಸಹಿತ ವಿವರ ನೀಡುವುದು)

(ಆ) ಸದ್ಯ ಒದಗಿಸಲಾಗಿರುವ ಒಟ್ಟು ಮೀಸಲಾತಿ ಪ್ರಮಾಣ ಎಷ್ಟು; ಇದನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಇ) ಈ ಪ್ರಮಾಣ ಬದಲಾಯಿಸಲು ಇರುವ ಕಾನೂನಾತ್ಮಕ ಪ್ರಕ್ರಿಯೆಗಳಾವುವು? (ವಿವರವಾದ ಮಾಹಿತಿ ನೀಡುವುದು)

## ಮತೀಯ/ಧಾರ್ಮಿಕ ಅಲ್ಪ ಸಂಖ್ಯಾತರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೯೬೪ (೩೪೧೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮತೀಯ/ಧಾರ್ಮಿಕ ಅಲ್ಪ ಸಂಖ್ಯಾತರ ಜನಸಂಖ್ಯೆ ಎಷ್ಟು; ಪ್ರತಿ ಮತ/ಧರ್ಮವಾರು ವಿವರ ನೀಡುವುದು; ಭಾಷಿಕ ಅಲ್ಪ ಸಂಖ್ಯಾತರ ಸಂಖ್ಯೆ ಎಷ್ಟು; ಪ್ರತಿ ಭಾಷಾವಾರು ಅಲ್ಪ ಸಂಖ್ಯಾತರ ವಿವರ ನೀಡುವುದು;

(ಆ) ಮತೀಯ ಧಾರ್ಮಿಕ ಅಲ್ಪ ಸಂಖ್ಯಾತರ ಸಾಮಾಜಿಕ ಆರ್ಥಿಕ/ ಶೈಕ್ಷಣಿಕ ಸ್ಥಿತಿಗತಿ ಕುರಿತು ಅಂಕಿ ಅಂಶಗಳ ವಿಶ್ಲೇಷಣಾತ್ಮಕ ವಿವರ ನೀಡುವುದು;

(ಇ) ಕಳೆದ ೦೩ ವರ್ಷಗಳಲ್ಲಿ ಅಲ್ಪ ಸಂಖ್ಯಾತರಿಗೆ ಒದಗಿಸಿರುವ ಅನುದಾನ ಎಷ್ಟು; (ಯೋಜನೆವಾರು ವಿವರ ನೀಡುವುದು) ಕೇಂದ್ರದ ಯೋಜನೆಗಳ ಕುರಿತು ಅಂಕಿ/ಸಂಖ್ಯಾತ್ಮಕ ವಿವರ ನೀಡುವುದು;

(ಈ) ಆಯಾಯ ಧಾರ್ಮಿಕ ಮತೀಯರಿಗೆ ದೊರೆತಿರುವ ಅನುದಾನ/ ಸೌಲಭ್ಯಗಳ ವಿಶ್ಲೇಷಣಾತ್ಮಕ ವಿವರ ನೀಡುವುದು;

(ಉ) ೨೦೧೧ರ ಜನಗಣತಿಯ ಪ್ರಕಾರ ರಾಜ್ಯದ ಒಟ್ಟು ಜನಸಂಖ್ಯೆ ಎಷ್ಟು; ಅದರಲ್ಲಿ ಗುರುತಿಸಿರುವ ಧರ್ಮಗಳವಾರು ಜನಸಂಖ್ಯೆ ಎಷ್ಟು; ರಾಜ್ಯದಲ್ಲಿರುವ ವೀರಶೈವ/ಲಿಂಗಾಯತರ, ಮುಸ್ಲಿಂ ಜನಾಂಗದ, ಜೈನರ, ಸಿಖ್‌ರ ಹಾಗೂ ಪಾರ್ಸಿಗಳ ಜನ ಸಂಖ್ಯೆ ಎಷ್ಟು; ಗುರುತಿಸಿರುವ ಪ್ರತಿ ಧರ್ಮ/ಜಾತಿ/ಪಂಗಡವಾರು ಜನ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಊ) ೨೦೧೧ರ ಜನಗಣತಿಯ ವರದಿಯ ಪ್ರತಿ ನೀಡುವುದು?

## ಮಂಡ್ಯ ನಗರದ ಡಾ:ಬಿ.ಆರ್. ಅಂಬೇಡ್ಕರ್ ಭವನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬೫ (೩೩೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರದಲ್ಲಿ ಡಾ:ಬಿ.ಆರ್ ಅಂಬೇಡ್ಕರ್ ಭವನವು ಮಂದಗತಿಯಲ್ಲಿ ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಇ) ಈ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು ಯಾವಾಗ? (ಮಾಹಿತಿ ನೀಡುವುದು)

## ಯಾತ್ರಿ ನಿವಾಸಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬೬ (೩೩೮೩) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು ಎಷ್ಟು ಯಾತ್ರಿನಿವಾಸಗಳಿವೆ; ಅವು ಯಾವುವು; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು ಮತ್ತು ಈ ಯಾತ್ರಿನಿವಾಸಗಳ ವ್ಯವಸ್ಥಾಪಕರ ಹೆಸರು ಮತ್ತು Contact ನಂಬರ್‌ಗಳನ್ನು ನೀಡುವುದು;

(ಆ) ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ಯಾತ್ರಿನಿವಾಸಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಮತ್ತು ಎಲ್ಲಿ ನಿರ್ಮಿಸಲಾಗುವುದು;

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳು ಯಾವುವು; (ವಿವರ ನೀಡುವುದು) ಇದಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು?

## ಖಾಲಿ ಇರುವ *Operation Theater Technician* ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬೭ (೩೩೭೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ Diploma in Operation Theater Technician ಕೋರ್ಸ್ ಹಾಗೂ RGUHS ನಡೆಸುವ Bsc in Operation theater Technician ಕೋರ್ಸ್‌ಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಕೋರ್ಸ್‌ಗಳು ಕರ್ನಾಟಕದಲ್ಲಿ ಎಷ್ಟು ಶಿಕ್ಷಣ ಸಂಸ್ಥೆಗಳಲ್ಲಿ ನಡೆಯುತ್ತಿವೆ; (ವಿವರ ನೀಡುವುದು)

(ಇ) ಮೇಲ್ಕಂಡ ಕೋರ್ಸ್‌ಗಳಲ್ಲಿ ಈವರೆವಿಗೂ ನೋಂದಣಿಯಾಗಿ ಉತ್ತೀರ್ಣರಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು;(ವಿವರ ನೀಡುವುದು)

(ಈ) ಈ ಕೋರ್ಸ್‌ಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ವೃಂದ ಮತ್ತು ನೇಮಕಾತಿ ನಿಯಮಗಳಡಿಯಲ್ಲಿ ಯಾವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರು, ಮತ್ತು ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು;

(ಉ) ಈವರೆವಿಗೂ ಈ ಕೋರ್ಸ್ ಮಾಡಿರುವ ಅಭ್ಯರ್ಥಿಗಳಿಗೆ ಇಲಾಖೆಯಲ್ಲಿ ಎಷ್ಟು ಹುದ್ದೆಗಳನ್ನು ನೀಡಲಾಗಿದೆ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ಪೂರ್ಣ ವಿವರ ನೀಡುವುದು)

## ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಶುಶ್ರೂಷಕಿಯರನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬೮ (೩೩೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮಂಜೂರಾಗಿರುವ ವೈದ್ಯರುಗಳ ಹಾಗೂ ಶುಶ್ರೂಷಕಿಯರ ಹುದ್ದೆ ಎಷ್ಟು; ಪ್ರಸ್ತುತ ಕಾರ್ಯನಿರ್ವಸುತ್ತಿರುವ ವೈದ್ಯರುಗಳ ಹಾಗೂ ಶುಶ್ರೂಷಕಿಯವರ ಸಂಖ್ಯೆ ಎಷ್ಟು; ಖಾಲಿ ಇರುವ ವೈದ್ಯರುಗಳ ಹಾಗೂ ಶುಶ್ರೂಷಕಿಯರ ಹುದ್ದೆ ಎಷ್ಟು; (ತಾಲ್ಲೂಕುವಾರು ಹಾಗೂ ಆರೋಗ್ಯ ಕೇಂದ್ರಗಳವಾರು ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರುಗಳ ಮತ್ತು ಶುಶ್ರೂಷಕಿಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರುಗಳನ್ನು ಮತ್ತು ಶುಶ್ರೂಷಕಿಯರನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಜಯದೇವ ಆಸ್ಪತ್ರೆವತಿಯಿಂದ ಬೆಂಗಳೂರು ಹೊರವಲಯದಲ್ಲಿ ತುರ್ತು ಚಿಕಿತ್ಸಾ ಘಟಕ ಸ್ಥಾಪಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬ (೩೩೮೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಮತ್ತು ಇತರೆ ಜಿಲ್ಲೆಗಳಿಂದ ಬೆಂಗಳೂರಿನ ಆಸ್ಪತ್ರೆಗಳಿಗೆ ತಲುಪಲು ರಸ್ತೆಗಳಲ್ಲಿನ ವಾಹನಗಳ ದಟ್ಟಣೆಯಿಂದ ಜನಸಾಮಾನ್ಯರು ಪಡುತ್ತಿರುವ ಕಷ್ಟ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯಿಂದ ಪಾರಾಗಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಬೆಂಗಳೂರಿನಲ್ಲಿ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಡಿಯಲ್ಲಿ ಜಯದೇವ ಆಸ್ಪತ್ರೆಯ ಮಾದರಿಯಲ್ಲಿ ಎಲ್ಲಾ ಸೌಲಭ್ಯಗಳನ್ನು ನೀಡಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಒಂದೊಂದು ಆಸ್ಪತ್ರೆಗಳನ್ನು ನಿರ್ಮಿಸುವ ಯೋಜನೆ ಸರ್ಕಾರಕ್ಕಿದೆಯೇ; ಅಥವಾ ಈ ಬಗ್ಗೆ ಪರ್ಯಾಯವಾಗಿ ಬೇರೆ ಯಾವುದಾದರೂ ಯೋಜನೆ ಸರ್ಕಾರಕ್ಕಿದೆಯೇ;

(ಇ) ಬೆಂಗಳೂರಿನ ಹೊರವಲಯಗಳಲ್ಲಿ ಜಯದೇವ ಆಸ್ಪತ್ರೆಯ ವತಿಯಿಂದ ತುರ್ತು ಚಿಕಿತ್ಸಾ ಘಟಕಗಳನ್ನು ಸ್ಥಾಪಿಸಿ ಜಯದೇವ ಆಸ್ಪತ್ರೆಗೆ ಬರುವ ರೋಗಿಗಳಿಗೆ ಅವರ ಪ್ರಾಣಹಾನಿಯಾಗದಂತೆ ಪ್ರಥಮ ಚಿಕಿತ್ಸೆ ನೀಡಿ ಆ ನಂತರ ಅವರನ್ನು ಮುಖ್ಯ ಜಯದೇವ ಆಸ್ಪತ್ರೆಗೆ ಕರೆತರುವ ವ್ಯವಸ್ಥೆ ಬಗ್ಗೆ ಸರ್ಕಾರಕ್ಕೆ ಚಿಂತನೆ ಇರುವುದೇ; ಇದ್ದಲ್ಲಿ, ಕೈಗೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):–**

೨೯೭೦ (೩೩೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಮುದಾಯ ಭವನಗಳಿಗೆ ಮಂಜೂರಗಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಗೆ ೨೦೧೭–೧೮ನೇ ಸಾಲಿನಲ್ಲಿ ಎಸ್.ಸಿ.ಪಿ/ ಟಿ.ಎಸ್.ಪಿ. ಯೋಜನೆ ಅಡಿಯಲ್ಲಿ ಒಟ್ಟು ಮಂಜೂರಾಗಿರುವ ಅನುದಾನ ಎಷ್ಟು;

(ಇ) ಸಮಾಜ ಕಲ್ಯಾಣ ಇಲಾಖೆ ಮುಖಾಂತರ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಭೂ ರಹಿತರಿಗೆ ಮಂಜೂರಾಗಿರುವ ಭೂಮಿ ಎಷ್ಟು; ಈ ಸೌಲಭ್ಯ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಇದಕ್ಕೆ ಖರ್ಚಾಗಿರುವ ವೆಚ್ಚ ಎಷ್ಟು; (ವಿವರ ನೀಡುವುದು)

(ಈ) ಮಾನ್ವಿ ತಾಲ್ಲೂಕಿನ ಕವಿತಾಳ ಪಟ್ಟಣದಲ್ಲಿ ಶಿವಪ್ಪ ತಾತನವರ ಮಠದ ಹತ್ತಿರ ಕನಕ ಭವನ ನಿರ್ಮಾಣ ಮಾಡುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಮಾನ್ವಿ ಪಟ್ಟಣದಲ್ಲಿ ಎಂ.ಸಿ.ಹೆಚ್. ಆಸ್ಪತ್ರೆ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೭೧ (ಇಇ೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ (MCH Hospital) ಪ್ರಾರಂಭಿಸಲು ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆ; ಹಾಗಿದ್ದಲ್ಲಿ, ಯಾವಾಗಿನಿಂದ ಎಂ.ಸಿ.ಹೆಚ್. ಆಸ್ಪತ್ರೆ ಪ್ರಾರಂಭಿಸಲು ಕ್ರಮ ಜರುಗಿಸಲಾಗುವುದು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ನಗರದಲ್ಲಿ ಸೂಪರ್ ಸ್ಪೆಷಲಿಸ್ಟ್ ಆಸ್ಪತ್ರೆ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಪ್ರವಾಸೋದ್ಯಮ ಇಲಾಖೆಯಿಂದ ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಿಗೆ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):–**

೨೯೭೨ (೩೩೭೮) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಪ್ರವಾಸೋದ್ಯಮ ಇಲಾಖೆಯಿಂದ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಿಗೆ ೨೦೧೭–೧೮ನೇ ಸಾಲಿನಲ್ಲಿ ನೀಡಿರುವ ಅನುದಾನ ಎಷ್ಟು? (ಜಿಲ್ಲಾವಾರು ಅನುದಾನದ ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ೨೦೧೩–೧೪ ರಿಂದ ೨೦೧೭–೧೮ರವರೆಗೂ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭೩ (೩೩೭೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ೨೦೧೩–೧೪ ರಿಂದ ೨೦೧೭–೧೮ನೇ ಸಾಲಿನವರೆಗೆ ಮಂಜೂರಾಗಿರುವ ಅನುದಾನ ಎಷ್ಟು; ಆ ಪೈಕಿ ಬಿಡುಗಡೆಯಾಗಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ೨೦೧೭–೧೮ರಲ್ಲಿ ರಾಯಚೂರು ಜಿಲ್ಲೆಗೆ ನೀಡಿರುವ ಅನುದಾನ ಎಷ್ಟು;

(ಇ) ಗಡಿನಾಡು ಪ್ರದೇಶಗಳು ಅಲ್ಲದೇ ಇರುವ ಗ್ರಾಮಗಳಿಗೆ ಅನುದಾನ ಮಂಜೂರಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ರಾಜೀವ್ ಗಾಂಧಿ ಸೂಪರ್ ಸ್ಪೇಷಲಿಸ್ಟ್ ಆಸ್ಪತ್ರೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೭೪ (೩೩೭೬) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿರುವ ರಾಜೀವ್‌ಗಾಂಧಿ ಸೂಪರ್ ಸ್ಪೆಷಲಿಸ್ಟ್ ಆಸ್ಪತ್ರೆಯನ್ನು ಪುನರ್ಶ್ಚೇತನ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದಕ್ಕೆ ಖರ್ಚಾಗಿರುವ ಮೊತ್ತ ಎಷ್ಟು;

(ಆ) ಸದರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಪೂರ್ತಿ ಪ್ರಮಾಣದ ಚಿಕಿತ್ಸೆ ನೀಡಲು ಎಲ್ಲಾ ಘಟಕಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಸೂಪರ್ ಸ್ಪೇಷಲಿಸ್ಟ್ ಆಸ್ಪತ್ರೆಯನ್ನು ಸ್ವಾಯತ್ತ ಸಂಸ್ಥೆಯಾಗಿ ಕಾರ್ಯನಿರ್ವಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರಿನಲ್ಲಿರುವ ಆರ್.ಐ.ಎಂ.ಎಸ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿಚೆನ್ನಮ್ಮ ವಸತಿ ಪ್ರೌಢಶಾಲೆ ಚಿತ್ರಕಲಾ ಶಿಕ್ಷಕರ ಹುದ್ದೆಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೯೭೫ (೩೪೩೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿಚೆನ್ನಮ್ಮ ವಸತಿ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ಖಾಲಿ ಇರುವ ಹುದ್ದೆಗಳೆಷ್ಟು; ಅವುಗಳನ್ನು ತುಂಬದಿರಲು ಕಾರಣವೇನು;

(ಆ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ನೇಮಕಾತಿ ಅಧಿಸೂಚನೆ ಹೊರಡಿಸಲು ೨೦೧೧ರಲ್ಲಿಯೇ ತೀರ್ಮಾನಿಸಿದರೂ ಇದುವರೆಗೆ ನೇಮಕಾತಿ ಆದೇಶ ನೀಡದಿರಲು ಕಾರಣವೇನು;

(ಇ) ಈಗಲಾದರೂ ತಕ್ಷಣ ಅವರಿಗೆ ನೇಮಕಾತಿ ಆದೇಶ ಕೊಡಲಾಗುವುದೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನೀಡಲು ಉದ್ದೇಶಿಸಲಾಗಿದೆ?

## ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ವಿಕಲಚೇತನರಿಗೆ ಮೀಸಲಿರಿಸಿದ ಹಣ ಖರ್ಚಾಗದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೯೭೬ (೩೪೩೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಕ್ಕೆ ಪ್ರತಿಶತ ಮೀಸಲಿರಿಸಲಾಗಿರುವ ಹಣ ಎಷ್ಟು;

(ಆ) ಮೀಸಲಿರಿಸಿದ ಹಣವನ್ನು ಧಾರವಾಡ ಜಿಲ್ಲೆಯಲ್ಲಿ ಸಂಪೂರ್ಣವಾಗಿ ಖರ್ಚು ಮಾಡಲಾಗಿದೆಯೇ;

(ಇ) ಖರ್ಚು ಮಾಡಿರದಿದ್ದಲ್ಲಿ ಇದಕ್ಕೆ ಯಾರು ಹೊಣೆ;

(ಈ) ವಿಕಲಚೇತನರ ಯೋಜನೆಯಡಿ ಮಂಜೂರಾದ ಹಣ ಖರ್ಚು ಮಾಡದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?

## ಆಡಳಿತ ಭಾಷೆಯಾಗಿ ಕನ್ನಡ ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೯೭೭ (೩೪೩೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಆಡಳಿತ ಭಾಷೆಯಾಗಿ ಕನ್ನಡವನ್ನು ಅನುಷ್ಠಾನಗೊಳಿಸಲು ಯಾವ ದಿನಾಂಕದಂದು ನಿರ್ಧರಿಸಲಾಯಿತು;

(ಆ) ಆಡಳಿತ ಭಾಷೆಯಾಗಿ ಕನ್ನಡ ಅನುಷ್ಠಾನಗೊಳಿಸುವ ಬಗ್ಗೆ ಇಲ್ಲಿಯವರೆಗೆ ಸರ್ಕಾರ ಹೊರಡಿಸಿದ ಆದೇಶ ಹಾಗೂ ಸುತ್ತೋಲೆಗಳ ಸಂಖ್ಯೆ ಎಷ್ಟು;

(ಇ) ಈ ಆದೇಶ ಹಾಗೂ ಸುತ್ತೋಲೆಗಳ ಅನುಷ್ಠಾನವಾದ ಬಗ್ಗೆ ನಿಗಾವಹಿಸಲು ರಚಿಸಿದ ಸಮಿತಿಗಳೇಷ್ಟು; ಅವುಗಳ ಅಧ್ಯಕ್ಷರು ಯಾರ್‍ಯಾರು;

(ಈ) ಈ ಸಮಿತಿಗಳ ಕಾರ್ಯನಿರ್ವಹಣೆಗೆ ಸರ್ಕಾರ ಇಲ್ಲಿಯವರೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು;

(ಉ) ಇಷ್ಟೆಲ್ಲಾ ಪ್ರಯತ್ನ ಮಾಡಿದರೂ ಆಡಳಿತ ಭಾಷೆಯಾಗಿ ಕನ್ನಡ ಅನುಷ್ಠಾನವಾಗದಿರಲು ಕಾರಣಗಳೇನು; ಯಾವ ಕಾಲಮಿತಿಗೊಳಗೆ ಕನ್ನಡ ಭಾಷೆಯನ್ನು ಸಂಪೂರ್ಣ ಆಡಳಿತ ಭಾಷೆಯನ್ನಾಗಿ ಅನುಷ್ಠಾನಗೊಳಿಸಲಾಗುವುದು?

## ವಸತಿ ಶಾಲೆಗಳಲ್ಲಿ ಕನಿಷ್ಠ ಸೌಲಭ್ಯಗಳ ಕೊರತೆ ಇರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೭೮ (ಇ೪೦೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ಮೊರಾರ್ಜಿ, ಏಕಲವ್ಯ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಅಲ್ಪಸಂಖ್ಯಾತರ ಆಶ್ರಮ ಶಾಲೆಗಳನ್ನು ಪ್ರಾರಂಭಿಸಲಾಗಿದೆ; (ವಿವರ ನೀಡುವುದು)

(ಆ) ಈಗಾಗಲೇ ಪ್ರಾರಂಭಿಸಲಾಗಿರುವ ವಸತಿ ಶಾಲೆಗಳಲ್ಲಿನ ಕೊರತೆಗಳು ಹಾಗೂ ಪೂರ್ಣ ಪ್ರಮಾಣದಲ್ಲಿ ಕನಿಷ್ಠ ಸೌಲಭ್ಯಗಳನ್ನು ಪೂರೈಸದಿದ್ದರೂ ಹೊಸ ಶಾಲೆಗಳನ್ನು ಪ್ರಾರಂಭಿಸುವ ಉದ್ದೇಶವೇನು;

(ಇ) ಈಗಾಗಲೇ ಪ್ರಾರಂಭಗೊಂಡಿರುವ ಶಾಲಾ ಕಾಲೇಜುಗಳಲ್ಲಿರುವ ಕೊರತೆಗಳನ್ನು ನೀಗಿಸಲು ಯಾವ ಕಾಲಮಿತಿಯೊಳಗೆ ಯಾವ ಯೋಜನೆಯನ್ನು ಹಾಕಿಕೊಳ್ಳಲಾಗಿದೆ? (ವಿವರ ನೀಡುವುದು)

## ಯಂತ್ರಚಾಲಿತ ದ್ವಿಚಕ್ರ ವಾಹನಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೭೯ (ಇ೪೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಯಂತ್ರಚಾಲಿತ ದ್ವಿಚಕ್ರ ವಾಹನ ಕೋರಿ ಸ್ವೀಕೃತಿಯಾದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸ್ವೀಕೃತಿಯಾದ ಅರ್ಜಿಗಳಲ್ಲಿ ಆಯ್ಕೆ ಮಾಡಲಾದ ಅರ್ಜಿಗಳ ಸಂಖ್ಯೆ ಎಷ್ಟು;

(ಇ) ಆಯ್ಕೆ ಮಾಡಿದ ಅರ್ಜಿಗಳಲ್ಲಿ ಎಷ್ಟು ಫಲಾನುಭವಿಗಳಿಗೆ ದ್ವಿಚಕ್ರವಾಹನ ವಿತರಿಸಲಾಗಿದೆ; (ವಿವರ ನೀಡುವುದು)

(ಈ) ಈ ಯೋಜನೆಗೆ ನಿಗಧಿಪಡಿಸಲಾದ ಅನುದಾನ ಎಷ್ಟು; (ಯೋಜನಾವಾರು ವಿವರ ನೀಡುವುದು)

(ಉ) ಆ ಪೈಕಿ ದ್ವಿಚಕ್ರ ವಾಹನಗಳ ಖರೀದಿಗೆ ಖರ್ಚಾದ ಒಟ್ಟು ಮೊತ್ತ ಎಷ್ಟು; (ವಿವರ ನೀಡುವುದು)

(ಊ) ದ್ವಿಚಕ್ರ ವಾಹನಗಳನ್ನು ವಿತರಿಸದಿರಲು ಕಾರಣಗಳೇನು?

## ಭಾರತರತ್ನ ಪ್ರೊ.ಸಿ ಎನ್.ಆರ್.ರಾವ್ ನೇತೃತ್ವದ ವಿಷನ್ ಗ್ರೂಪ್ ಶಿಫಾರಸ್ಸಿನ ಆಧಾರದ ಮೇಲೆ ವಿಜ್ಞಾನ ತಂತ್ರಜ್ಞಾನ ಕ್ಷೇತ್ರದ ಸುಧಾರಣೆಗಾಗಿ ಕೈಗೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೮೦ (೩೪೦೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರತರತ್ನ ಪ್ರೊ.ಸಿ.ಎನ್.ಆರ್.ರಾವ್ ನೇತೃತ್ವದ ವಿಷನ್ ಗ್ರೂಪ್ ಶಿಫಾರಸ್ಸಿನ ಆಧಾರದ ಮೇಲೆ ವಿಜ್ಞಾನ ತಂತ್ರಜ್ಞಾನ ಕ್ಷೇತ್ರದ ಸುಧಾರಣೆಗಾಗಿ ಖರ್ಚು ಮಾಡಲಾಗುತ್ತಿರುವ ಹಣ ಎಷ್ಟು;

(ಆ) ಈ ತರಹದ ಸುಧಾರಣೆಗೆ ಖರ್ಚು ಮಾಡುತ್ತಿರುವ ಹಣವನ್ನು ಯಾವ ಕ್ಷೇತ್ರಗಳ ಸಂಶೋಧನೆಗೆ ನೀಡಲಾಗುತ್ತಿದೆ; (ವಿವರ ನೀಡುವುದು)

(ಇ) ಈ ಯೋಜನೆ ಅಡಿಯಲ್ಲಿ ಎಷ್ಟು ಪ್ರಸ್ತಾವನೆಗಳು ಬಂದಿವೆ ಮತ್ತು ಅವುಗಳಲ್ಲಿ ಆಯ್ಕೆ ಮಾಡಿದ ಯೋಜನೆಗಳ ವಿವರ ನೀಡುವುದು;

(ಈ) ಈ ಯೋಜನೆಯ ರೂಪುರೇಷೆಗಳೇನು? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಿಶೇಷವಾಗಿ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಡೆಂಘೀ ಜ್ವರದಿಂದ ಜನ ಪೀಡಿತರಾಗಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೮೧ (೩೪೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿಶೇಷವಾಗಿ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಡೆಂಘೀ ಜ್ವರದಿಂದ ಅತ್ಯಧಿಕ ಜನ ಪೀಡಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸೊಳ್ಳೆಗಳ ನಿಯಂತ್ರಣಕ್ಕಾಗಿ ಸರ್ಕಾರ ಕೈಗೊಂಡ ಕ್ರಮವೇನು;

(ಇ) ಬೆಂಗಳೂರಿನಲ್ಲಿ ಕಳೆದ ಜೂನ್ ತಿಂಗಳಿಂದ ಈವರೆಗೆ ಡೆಂಘೀ ಜ್ವರಕ್ಕೆ ತುತ್ತಾದ ರೋಗಿಗಳ ಸಂಖ್ಯೆ ಎಷ್ಟು;

(ಈ) ಈ ಜ್ವರದಿಂದ ಪೀಡಿತರಾಗಿ ಸಾವನ್ನಪ್ಪಿರುವವರ ಸಂಖ್ಯೆ ಎಷ್ಟು; ವಿಭಾಗವಾರು ವಿವರ ನೀಡುವುದು;

(ಉ) ಈ ರೋಗದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಖರ್ಚಾಗದೆ ಉಳಿದಿರುವ ಹಣ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೯೮೨ (೩೪೪೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಜಿಲ್ಲೆಯ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಹಾಲಿ ಖರ್ಚಾಗದೆ ಉಳಿದಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ಕೊಡುವುದು)

(ಆ) ಈ ಹಣವು ಖರ್ಚಾಗದೆ ಉಳಿಯಲು ಕಾರಣಗಳೇನು ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ೨೦೦೧ ರಿಂದ ಇಲ್ಲಿಯವರೆಗೆ ಸೇವೆ ಸಲ್ಲಿಸಿದ ನಿಕಟಪೂರ್ವ ಶಾಸಕರು ಎಷ್ಟು ಜನ; (ವಿವರವಾಗಿ ಹೆಸರು, ಚುನಾಯಿತ ಕ್ಷೇತ್ರ ಒಳಗೊಂಡಂತೆ ಮಾಹಿತಿ ನೀಡುವುದು)

(ಈ) ಬಾಕಿ ಉಳಿದಿರುವ ಅನುದಾನದಲ್ಲಿ ನಿಕಟಪೂರ್ವ ಸದಸ್ಯರ ಖರ್ಚಾಗದೆ ಉಳಿದಿರುವ ಅನುದಾನ ಎಷ್ಟು? (ವಿವರವನ್ನು ಜಿಲ್ಲಾವಾರು ನೀಡುವುದು)

## ಮಾತೃ ಪೂರ್ಣ ಯೋಜನೆಯ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮೩ (೩೩೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಂಡಿರುವ ಮಾತೃಪೂರ್ಣ ಯೋಜನೆಯಲ್ಲಿ ಸಾಕಷ್ಟು ನ್ಯೂನ್ಯತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ (ನೀಡುವುದು)

(ಆ) ಅಂಗನವಾಡಿ ಕೇಂದ್ರವನ್ನು ನಿರ್ವಹಿಸಲು ಇರುವ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಈಗಾಗಲೇ ಬಹಳ ಜವಾಬ್ದಾರಿಗಳಿದ್ದು, ಕಾರ್ಯಕರ್ತೇ/ಸಹಾಯಕಿಯರಿಗೆ ಸಭೆ ಹಾಗೂ ಇನ್ನಿತರೆ ಕಾರ್ಯಕ್ರಮಗಳು ಇದ್ದ ಸಮಯದಲ್ಲಿ ಅಥವಾ ರಜೆ ತೆಗೆದುಕೊಂಡ ಸಮಯದಲ್ಲಿ ಕಾರ್ಯಕರ್ತೆ/ ಸಹಾಯಕಿಯರು ಮಕ್ಕಳನ್ನು ನೋಡಿಕೊಂಡು ಅವರಿಗೆ ಅಡುಗೆ ಮಾಡಿಕೊಂಡು ಮಾತೃಪೂರ್ಣ ಫಲಾನುಭವಿಗಳಿಗೆ ಕರೆಯಲು ಮನೆ ಮನೆಗೆ ಹೋಗಬೇಕಾಗಿರುವುದರಿಂದ ಇದನ್ನು ಸರಿದೂಗಿಸಿಕೊಂಡು ಹೋಗಬೇಕೆನ್ನುವುದರ ಬಗ್ಗೆ ಸರ್ಕಾರ ಸೂಕ್ತ ನಿರ್ದೇಶನ ನೀಡುವುದೇ: (ವಿವರ ನೀಡುವುದು)

(ಇ) ಮಾತೃಪೂರ್ಣ ಫಲಾನುಭವಿಗಳು ದೂರದಿಂದ ಬರಲು ಬೇಸರ ವ್ಯಕ್ತಪಡಿಸುತ್ತಿದ್ದು, ಇದರಿಂದ ಮಾಡಿಟ್ಟ ಆಹಾರ ಪದಾರ್ಥ ಅನಾವಶ್ಯಕವಾಗಿ ಹಾಳಾಗುತ್ತಿರುವುದು ಹಾಗೂ ಕೆಲವು ಬಾಣಂತಿಯರು ಹೆಚ್ಚು ಉಪ್ಪು/ಖಾರ ಬಯಸಿದರೆ ಇನ್ನೂ ಕೆಲವರು ಕಡಿಮೆ ಉಪ್ಪು/ಖಾರ ಬಯುಸುವುದರಿಂದ ಮನಸ್ಥಾಪಗಳುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಅನುಸೂಚಿತ ಪಂಗಡಗಳ ಹಿಂದುಳಿದ ಪ್ರವರ್ಗಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೯೮೪ (೩೪೫೧ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ, ಅನುಸೂಚಿತ, ಜಾತಿ, ಅನುಸೂಚಿತ ಪಂಗಡ ಹಿಂದುಳಿದ ಪ್ರವರ್ಗಗಳಿಗೆ ಸೇರಿದ ಪ್ರತಿ ಜಾತಿ/ ಪಂಗಡಗಳು ಯಾವುವು; ಅವುಗಳಿಗೆ ಒದಗಿಸಿದ ಶೈಕ್ಷಣಿಕ /ನೌಕರಿ ಔದ್ಯೋಗಿಕ ಮೀಸಲಾತಿ ಪ್ರವರ್ಗಗಳು ಯಾವುವು; (ವಿವರ ನೀಡುವುದು) ನೀಡಲಾಗಿರುವ ಪ್ರತಿಶತ ಮೀಸಲಾತಿ ಪ್ರಮಾಣ ಎಷ್ಟು; (ವಿವರ ನೀಡುವುದು)

(ಆ) ಸದ್ಯ ಒದಗಿಸಲಾಗಿರುವ ಒಟ್ಟು ಮೀಸಲಾತಿ ಪ್ರಮಾಣ ಎಷ್ಟು; ಇದನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಇ) ಈ ಪ್ರಮಾಣ ಬದಲಾಯಿಸಲು ಇರುವ ಕಾನೂನಾತ್ಮಕ ಪ್ರಕ್ರಿಯೆ ಯಾವುದು? (ವಿವರ ನೀಡುವುದು)

## ಪ್ರವಾಸಿ ಮಿತ್ರ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮೫ (೩೩೬೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಯಲ್ಲಿ ಪ್ರವಾಸಿ ಮಿತ್ರ ಯೋಜನೆಯಡಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳಿಗೆ ವೇತನ ಕಡಿಮೆಯಿದ್ದು, ವೇತನ ಪರಿಷ್ಕರಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಆ) ಸದರಿ ಪ್ರವಾಸಿ ಮಿತ್ರ ಮತ್ತು ಪ್ರವಾಸಿ ಗೈಡ್‌ಗಳಿಗೆ PF & ESI ಸೌಲಭ್ಯ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಇ) ಪ್ರವಾಸೋದ್ಯಮ ಇಲಾಖೆಯಲ್ಲಿನ ಪ್ರವಾಸಿ ಮಿತ್ರ ಸೇರಿದಂತೆ ವಿವಿಧ ಸ್ತರಗಳಲ್ಲಿನ ಗುತ್ತಿಗೆ ನೌಕರರ ಹಿತ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಆರೋಗ್ಯ ಇಲಾಖೆಯ ನಿರ್ದೇಶನಾಲಯವನ್ನು "ಆರೋಗ್ಯ ಭವನಕ್ಕೆ" ಸ್ಥಳಾಂತರದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮೬ (ಇಇ೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕರ ಅನುಕೂಲಕ್ಕಾಗಿ ಬೆಂಗಳೂರಿನ ಆರೋಗ್ಯ ಇಲಾಖೆಯ ಎಲ್ಲಾ ಕಛೇರಿಗಳನ್ನು ಒಂದೇ ಕಡೆ ಮಾಗಡಿ ರಸ್ತೆಯಲ್ಲಿರುವ "ಆರೋಗ್ಯ ಭವನಕ್ಕೆ" ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ; ಹಾಗಿದ್ದಲ್ಲಿ, ಯಾವಾಗ ಸ್ಥಳಾಂತರಿಸಲಾವುದು;

(ಆ) ಆರೋಗ್ಯ ಇಲಾಖೆಯಲ್ಲಿನ ಗ್ರೂಪ್ ಬಿ ಮತ್ತು ಸಿ ವೃಂದಕ್ಕೆ ಬರುವ ನೌಕರರುಗಳಲ್ಲಿ ಯಾರು ಯಾರನ್ನು ಅನ್ಯಪರ ಸೇವೆ/ ನಿಯೋಜನೆಯ ಮೇರೆಗೆ ಯಾವ ಯಾವ ಸ್ಥಳದಲ್ಲಿ ನೇಮಕ

ಮಾಡಲಾಗಿದೆ; ಈ ಬಗ್ಗೆ ಪುನರ್ ಪರಿಶೀಲನೆ ನಡೆಸಿ ಅನಾವಶ್ಯಕವಾಗಿರುವ ಕಡೆಗಳಲ್ಲಿ ಕಾರ್ಯವಹಿಸುವ ಆದೇಶಗಳನ್ನು ರದ್ದುಪಡಿಸಲಾಗುವುದೇ; ವಿವರ ನೀಡುವುದು;

(ಇ) ಆರೋಗ್ಯ ಇಲಾಖೆಯ " ಆಹಾರ ಸುರಕ್ಷತಾ ವಿಭಾಗದಲ್ಲಿ" ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು; ಈ ಬಗ್ಗೆ ವಿಳಂಬಕ್ಕೆ ಕಾರಣವಾಗಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು; ವಿವರ ನೀಡುವುದು;

(ಈ) ನಿರ್ದೇಶನಾಲಯದ ಜಾಗೃತ ಕೋಶ (ವಿಜಿಲನ್ಸ್) ದಲ್ಲಿ ವಿಲೇವಾರಿಗೆ ಯಾವ-ಯಾವ ಕಡತಗಳು ಎಷ್ಟು ಸಮಯದಿಂದ ಬಾಕಿ ಇರುತ್ತವೆ; ವಿಳಂಭಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು; ವಿವರ ನೀಡುವುದು?

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭ ಮಾಡದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೮೭ (೩೩೬೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ಈ ಹಿಂದಿನ ಆಯವ್ಯಯದಲ್ಲಿ ಪ್ರತಿ ಜಿಲ್ಲೆಗೊಂದು ಮೆಡಿಕಲ್ ಕಾಲೇಜು ಪ್ರಾರಂಭಿಸುವುದಾಗಿ ಘೋಷಿಸಿದ್ದು, ಇದುವರೆಗೂ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು;

(ಆ) ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಿಕ್ಕಾಗಿ, ಭೂಮಿ ಕಾಯ್ದಿರಿಸಲು ಜಿಲ್ಲಾಡಳಿತಗಳಿಗೆ ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಈ ಬಗ್ಗೆ ಇಲಾಖೆಯು ಯಾವ ಪೂರ್ವಭಾವಿ ಕ್ರಮ ಕೈಗೊಳ್ಳಲಿದೆ;

(ಇ) ಕರಾವಳಿಯ ಅವಳಿ ಜಿಲ್ಲೆಗಳಾದ ಉಡುಪಿ ಮತ್ತು ಮಂಗಳೂರಿನಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜುಗಳನ್ನು ಪ್ರಸಕ್ತ ಸಾಲಿನಲ್ಲಿಯೇ ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಎಷ್ಟು ಅವಧಿಯ ಒಳಗೆ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಮಂಜೂರು ಮಾಡಿ, ಈ ಎರಡು ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗುವುದು?

## ಹಿಂದುಳಿದ ವರ್ಗಗಳ ವಿವಿಧ ಯೋಜನೆ ನಿಗಧಿತ ಗುರಿ ತಲುಪಲು ಸರ್ಕಾರ ವಿಫಲವಾಗಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮೮ (೩೩೬೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಇರುವ ಗಂಗಾ ಕಲ್ಯಾಣ ಮತ್ತು ಇತರೆ ಸಾಲ, ನೆರವು, ಆರ್ಥಿಕ ಅಭಿವೃದ್ಧಿ ಯೋಜನೆಗಳೂ ನಿರೀಕ್ಷಿತ ಗುರಿ ತಲುಪದೇ ಇರುವುದು ನಿಜವೇ;

(ಆ) ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಇರುವ ಯೋಜನೆಗಳಾವುವು; ಕಳೆದ ೩ ವರ್ಷದಲ್ಲಿ ಹಿಂದುಳಿದ ವರ್ಗಗಳ

ಜನರ ಅಭಿವೃದ್ಧಿಗಾಗಿ ಕಾಯ್ದಿರಿಸಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು; (ವರ್ಷವಾರು–ಜಿಲ್ಲಾವಾರು, ಯೋಜನೆಗಳ ವಿವರ ನೀಡುವುದು); ಗಂಗಾ ಕಲ್ಯಾಣ ಯೋಜನೆಯ ಪ್ರತ್ಯೇಕ ವಿವರ ನೀಡುವುದು;

(ಇ) ಅರಿವು ಶೈಕ್ಷಣಿಕ ಸಾಲು ಯೋಜನೆ ಗುರಿ ಕಡಿಮೆ ಇರುವುದು, ಎರಡನೇ ಕಂತು ಬಿಡುಗಡೆಯಾಗದಿರುವುದು ಮತ್ತು ಗಂಗಾ ಕಲ್ಯಾಣ ಯೋಜನೆ ಗುರಿ ಕಡಿಮೆ ಇರುವುದು, ಆಯ್ಕೆಯಾದ ಫಲಾನುಭವಿಗಳಿಗೆ ೩–೪ ವರ್ಷದಿಂದ ಕೊಳವೆ ಬಾವಿ ನಿರ್ಮಿಸದೇ ಇರುವುದು, ವಿದ್ಯುತ್ ಸಂಪರ್ಕ ನೀಡದೇ ಇರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ವಿವಿಧ ಯೋಜನೆಗಳ ಸಮರ್ಪಕವಾಗಿ ಕಾಲಮಿತಿಯಲ್ಲಿ ಅನುಷ್ಠಾನ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ವಿಧವೆಯರು ಮತ್ತು ವಿಕಲ ಚೇತನರಿಗೆ ಮೀಸಲಾತಿ ಕಲ್ಪಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮೯ (೩೩೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧವೆಯರಿಗೆ ಸರ್ಕಾರಿ/ಅರೆ ಸರ್ಕಾರಿ ಹುದ್ದೆಗಳಲ್ಲಿ ಶೆ:೧ ರಷ್ಟು ಮೀಸಲಾತಿ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ಅದನ್ನು ಅನುಷ್ಠಾನ ಮಾಡಲು ಅಧಿಕೃತ ಆದೇಶ ಹೊರಡಿಸಲಾಗಿದೆಯೇ;

(ಆ) ಇಲ್ಲದಿದ್ದಲ್ಲಿ, ಆದೇಶಗಳನ್ನು ಯಾವಾಗ ಹೊರಡಿಸಲಾಗುವುದು; ಈ ಬಗ್ಗೆ ಸರ್ಕಾರದ ನಿಲುವೇನು; (ವಿವರ ನೀಡುವುದು)

(ಇ) ವಿಕಲಚೇತನರಿಗೆ ಶೇ: ೩ರಷ್ಟು ಸರ್ಕಾರಿ ಹುದ್ದೆಗಳನ್ನು ಮೀಸಲಿರಿಸಿದಂತೆ, ಅದೇ ಮಾದರಿಯಲ್ಲಿ, ಸಹಕಾರಿ ಕ್ಷೇತ್ರ ಮತ್ತು ಖಾಸಗಿ ಕ್ಷೇತ್ರಗಳಲ್ಲಿನ ಹುದ್ದೆಗಳಲ್ಲಿ ವಿಕಲಚೇತನರಿಗೆ ಮೀಸಲಾತಿ ಕಲ್ಪಿಸುವ ಕುರಿತು ಸರ್ಕಾರ ಯೋಜನೆ ರೂಪಿಸಿದೆಯೇ; (ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಸಹಕಾರಿ ಮತ್ತು ಖಾಸಗಿ ಕ್ಷೇತ್ರದಲ್ಲಿನ ಉದ್ಯೋಗದಲ್ಲಿ ವಿಕಲಚೇತನರು, ಕನ್ನಡ (ಸ್ಥಳೀಯರಿಗೆ) ಮೀಸಲಾತಿ ಮತ್ತು ಪ್ರಾತಿನಿಧ್ಯತೆ ನೀಡುವ ಕುರಿತು ಸರ್ಕಾರದ ನಿಲುವೇನು;

(ಉ) ಅಂತಹ ಯೋಜನೆ/ನಿಯಮಾವಳಿ/ ಕಾಯಿದೆಯನ್ನು ಸರ್ಕಾರ ಯಾವಾಗ ಅನುಷ್ಠಾನಕ್ಕೆ ತರಲಿದೆ? (ವಿವರ ನೀಡುವುದು)

## ಬಿ.ಪಿ.ಎಲ್. ಕಾರ್ಡ್‌ಗಳ ವಿತರಣೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦ (೩೪೩೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸ ಬಿ.ಪಿಎಲ್. ಕಾರ್ಡ್ ವಿತರಣೆಗಾಗಿ ಸ್ವೀಕೃತವಾಗಿದ್ದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಎಷ್ಟು ಅರ್ಜಿದಾರರಿಗೆ ಬಿ.ಪಿ.ಎಲ್. ಕಾರ್ಡ್ ವಿತರಣೆ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಾಕಿ ಇರುವ ಅರ್ಜಿದಾರರಿಗೆ ಎಷ್ಟು ದಿನಗಳಲ್ಲಿ ಬಿ.ಪಿ.ಎಲ್. ಕಾರ್ಡ್ ಅನ್ನು ವಿತರಣೆ ಮಾಡಲಾಗುವುದು;

(ಈ) ಸಕಾಲ ಯೋಜನೆಯಡಿ ಬಿ.ಪಿಎಲ್. ಕಾರ್ಡ್‌ಗೆ ಸಲ್ಲಿಸಿದ ಅರ್ಜಿಗಳನ್ನು ಇಲಾಖೆಯು ಎಷ್ಟು ದಿನಗಳಲ್ಲಿ ಇತ್ಯರ್ಥಪಡಿಸಬೇಕು? (ವಿವರ ನೀಡುವುದು)

## ತುಮಕೂರು ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗ ಹರಡಿರುವ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧ (೩೪೩೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಸಾಂಕ್ರಾಮಿಕ ರೋಗ ಹರಡಿರುವ ಬಗ್ಗೆ ವರದಿಯಾಗಿದೆ; (ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ ಕಾಯಿಲೆಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ನಿಯಂತ್ರಣಕ್ಕೆ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಡೆಂಗ್ಯೂ ರೋಗಕ್ಕೆ ಚಿಕಿತ್ಸೆ ನೀಡಲು ಜಿಲ್ಲಾ ಆಸ್ಪತ್ರೆಯಲ್ಲಿ ವ್ಯವಸ್ಥೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ಯಾವ ವ್ಯವಸ್ಥೆಯನ್ನು ಮಾಡಲಾಗಿದೆ; (ವಿವರ ನೀಡುವುದು)

(ಈ) ರಕ್ತನಿಧಿ ಕೇಂದ್ರಗಳಲ್ಲಿ ಪ್ಲೇಟ್‌ಲೆಟ್ ಒದಗಿಸಲು ಖಾಸಗಿ ಆಸ್ಪತ್ರೆಗಳ ಮೇಲೆ ಅವಲಂಭಿತವಾಗಿದೆಯೇ; ಹಾಗಿದ್ದಲ್ಲಿ, ಆ ಆಸ್ಪತ್ರೆಗಳು ಯಾವುವು? (ವಿವರ ನೀಡುವುದು)

## ಐ.ಟಿ. ಮತ್ತು ಬಿ.ಟಿ ಉದ್ಯಮಗಳ ವಿವರದ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೭ ೨ (೩೪೩೩) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿರುವ ಐ.ಟಿ. ಮತ್ತು ಬಿ.ಟಿ ಉದ್ಯಮಗಳ ಸಂಖ್ಯೆ ಎಷ್ಟು; ಅವು ಯಾವುವು; (ಕಂಪನಿಗಳ ದೂರವಾಣಿ ಸಂಖ್ಯೆ ಮತ್ತು ಆ ಕಂಪನಿ ಮಾಲೀಕರ ಹೆಸರು ಸಹಿತ ಮಾಹಿತಿ ನೀಡುವುದು)

(ಆ) ಈ ಉದ್ಯಮಗಳಲ್ಲಿ ಕೆಲಸ ಮಾಡುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದ ರಾಜಧಾನಿಗೆ ಹತ್ತಿರ ಇರುವ ಇತರೆ ಜಿಲ್ಲೆಗಳಲ್ಲಿ ಈ ಉದ್ಯಮಗಳನ್ನು ಸ್ಥಾಪಿಸುವಂತೆ ಖಾಸಗಿಯವರಿಗೆ ಪ್ರೋತ್ಸಾಹಿಸಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರ ನೀಡುವುದು)

(ಈ) ಬೆಂಗಳೂರಿನಲ್ಲಿ ಮಿತಿ ಮೀರಿ ಬೆಳೆಯುತ್ತಿರುವ ಜನಸಂಖ್ಯೆ ಮತ್ತು ಟ್ರಾಫಿಕ್ ಸಮಸ್ಯೆಗಳಿರುವುದರಿಂದ ಮತ್ತು ಬೇರೆ ಜಿಲ್ಲೆಗಳಿಂದ ಜನರು ವಲಸೆ ಬರುವುದನ್ನು ತಪ್ಪಿಸುವ ಸಲುವಾಗಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ರಾಜಧಾನಿಗೆ ಹತ್ತಿರವಿರುವ ತುಮಕೂರು, ಹಾಸನ, ಮಂಡ್ಯ, ಮೈಸೂರಿನಂತಹ ಜಿಲ್ಲೆಗಳಲ್ಲಿ ಇಂತಹ ಉದ್ಯಮಗಳನ್ನು ಸ್ಥಾಪಿಸಲು ಸರ್ಕಾರ ಪ್ರಯತ್ನ ಮಾಡುವುದೆ? (ವಿವರ ನೀಡುವುದು)

## ಸರ್ಕಾರದ ಮಾತೃಪೂರ್ಣ ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯೩ (೩೩೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಮಾತೃಪೂರ್ಣ ಯೋಜನೆಯಲ್ಲಿ ಅಪಾರ ಪ್ರಮಾಣ ಭ್ರಷ್ಟಾಚಾರದ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮಾತೃಪೂರ್ಣ ಯೋಜನೆಯ ಅಕ್ರಮ ತಡೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾತೃಪೂರ್ಣ ಯೋಜನೆಗೆ ಸರ್ಕಾರ ಮೀಸಲಿರಿಸಿದ ಅನುದಾನವೆಷ್ಟು; ಇದರ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಯೋಜನೆಯ ಪೂರ್ಣ ವಿವರ ನೀಡುವುದು)

(ಈ) ಗರ್ಭಿಣಿಯರಾದ ಮಾತೆಯಂದಿರನ್ನು ಬಿಸಿಯೂಟಕ್ಕಾಗಿ ಅಂಗನವಾಡಿಗಳಿಗೆ ದಿನನಿತ್ಯ ಬನ್ನಿರೆನ್ನುವುದು ವಾಸ್ತವಿಕವಾಗಿ ಸಮಂಜಸವೇ; ಗರ್ಭಿಣಿಯರು ಅಂಗನವಾಡಿ ಕೇಂದ್ರಗಳಲ್ಲಿ ಊಟಕ್ಕಾಗಿ ಸರತಿ ಸಾಲಿನಲ್ಲಿ, ಬಿಸಿಲಿನಲ್ಲಿ ನಿಲ್ಲುವುದು/ ಕಾಯುವುದು ವೈಜ್ಞಾನಿಕವಾಗಿ ಸರಿಯೇ; (ವಿವರ ನೀಡುವುದು)

(ಉ) ಮಾತೃಪೂರ್ಣ ಯೋಜನೆಯ ಗುತ್ತಿಗೆಯನ್ನು ಯಾವ ಯಾವ ಕಂಪನಿಗಳಿಗೆ ನೀಡಲಾಗಿದೆ; ಈ ಕಂಪನಿಗಳು ಸರ್ಕಾರ ನಿಯಮಾವಳಿಗಳನ್ನು ಪಾಲಿಸುತ್ತಿದೆಯೇ? (ವಿವರ ನೀಡುವುದು)

## ಗೋವಾದಲ್ಲಿ ಕನ್ನಡಿಗರ ಮೇಲೆ ನಡೆಯುತ್ತಿರುವ ದೌರ್ಜನ್ಯದ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯೪ (೩೩೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೋವಾದಲ್ಲಿ ಕನ್ನಡಿಗರ ಮೇಲೆ ನಡೆಯುತ್ತಿರುವ ದೌರ್ಜನ್ಯದಿಂದ ಕನ್ನಡಿಗರು ಅಲ್ಲಿ ನಿರಾಶ್ರಿತರಾಗಿ ತವರಿನತ್ತ ಹೊರಟಿರುವುದು, ಹಾಗೂ ಮನೆಗಳನ್ನು ಕಳೆದುಕೊಂಡು ಬೀದಿಗೆ ಬಿದ್ದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಗೋವಾ ಕನ್ನಡಿಗ ನಿರಾಶ್ರಿತರ ರಕ್ಷಣೆಗೆ ಸರ್ಕಾರ ಏನೇನು ಕ್ರಮಗಳನ್ನು ತೆಗೆದುಕೊಂಡಿದೆ;

(ಇ) ಗೋವಾದಲ್ಲಿ ನಿರಾಶ್ರಿತರಾಗಿರುವ ಕನ್ನಡಿಗರಿಗೆ ಸರ್ಕಾರವು ಈಗಾಗಲೇ ಯಾವ ಯಾವ ನೆರವು ನೀಡಿದೆ; (ವಿವರ ನೀಡುವುದು)

(ಈ) ಗೋವಾದಲ್ಲಿ ಕನ್ನಡಿಗರ ಮೇಲೆ ದೌರ್ಜನ್ಯ ನಡೆಯದಂತೆ ಶಾಶ್ವತವಾಗಿ ತಡೆಯಲು ಗೋವಾ ಸರ್ಕಾರದೊಂದಿಗೆ ನಮ್ಮ ಸರ್ಕಾರ ತೆಗೆದುಕೊಂಡ ನಿಲುವೇನು; ಸರ್ಕಾರ ತೆಗೆದುಕೊಂಡ ಸೂಕ್ತ ಶಾಶ್ವತ ಪರಿಹಾರವೇನು? (ವಿವರ ನೀಡುವುದು)

## ಮಹಾನಗರಗಳ ವ್ಯಾಪ್ತಿಯಲ್ಲಿ ಎಚ್೧ ಎನ್ ೧ ಜ್ವರ ಪೀಡಿತರು ಅತೀ ಹೆಚ್ಚಾಗುತ್ತಿರುವ ವಿಚಾರ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯೫ (೩೩೮೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮಹಾನಗರಗಳ ವ್ಯಾಪ್ತಿಯಲ್ಲಿ ಎಚ್ ೧ ಎನ್ ೧ ಜ್ವರ ಪೀಡಿತರು ಅತೀ ಹೆಚ್ಚಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಎಚ್೧ ಎನ್ ೧ ಖಾಯಿಲೆ ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಮಹಾನಗರಗಳ ವ್ಯಾಪ್ತಿಯಲ್ಲಿಯೇ ಎಚ್ ೧ ಎನ್ ೧ ಖಾಯಿಲೆ ವಿಪರೀತ ಜಾಸ್ತಿಯಾಗಲು ಕಾರಣಗಳೇನು;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಎಚ್೧ ಎನ್೧ ಪ್ರಕರಣಗಳು ದಾಖಲಾಗಿವೆ; ಅದರಿಂದ ಮರಣ ಹೊಂದಿದವರ ಸಂಖ್ಯೆ ಎಷ್ಟು;

(ಉ) ಕಳೆದ ಮೂರು ವರ್ಷಗಳಲ್ಲಿ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸಲು ತಡೆಗಟ್ಟಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ಸದರಿ ಕಾರ್ಯಕ್ರಮಗಳಿಗೆ ಸರ್ಕಾರ ಖರ್ಚು ಮಾಡಿದ ಅನುದಾನವೆಷ್ಟು? (ವರ್ಷವಾರು ವಿವರ ಒದಗಿಸುವುದು)

## ಅಂಗಡಿ ಮತ್ತು ಪೆಟ್ರೋಲ್ ಬಂಕ್‌ಗಳಲ್ಲಿ ತೂಕ ಮತ್ತು ಅಳತೆಯಲ್ಲಿ ಮೋಸ ಮಾಡುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯೬ (೩೩೮೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿಯ ಅಂಗಡಿಗಳಲ್ಲಿ ಮತ್ತು ಪೆಟ್ರೋಲ್ ಬಂಕ್‌ಗಳಲ್ಲಿ ತೂಕ ಮತ್ತು ಅಳತೆಯಲ್ಲಿ ಮೋಸ ಮಾಡುತ್ತಿರುವುದು ಹಾಗೂ ಮೀಟರ್ ಟ್ಯಾಪರಿಂಗ್ ಮಾಡುತ್ತಿರುವುದರಿಂದ ಗ್ರಾಹಕರಿಗೆ ಅನ್ಯಾಯವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಗ್ರಾಹಕರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಗಟ್ಟಿ ತಪಾಸಣೆ ನಡೆಸಿ ನಿಯಮ ಉಲ್ಲಂಘನೆ ಆಗಿದ್ದರೆ, ಇದಕ್ಕೆ ಕಾರಣರಾದವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು; ತೂಕ ಮತ್ತು ಅಳತೆಯನ್ನು ಯಾವ ವರ್ಗದ ಅಧಿಕಾರಿಗಳು ತಪಾಸಣೆ ನಡೆಸುತ್ತಾರೆ ಮತ್ತು ರಾಜ್ಯದಲ್ಲಿ ಇರುವ ಒಟ್ಟು ತಪಸಣಾ ಅಧಿಕಾರಗಳ ಹುದ್ದೆಗಳೆಷ್ಟು;

(ಇ) ಕಳೆದ ೩ ವರ್ಷಗಳಿಂದ ಪೊಟ್ಟಣ ಸಾಮಗ್ರಿಗಳ ನಿಖರವಾದ ಅಳತೆತೂಕ ತಪಾಸಣೆ ನಡೆಸಲು ಹಾಕಿಕೊಂಡ ವಾರ್ಷಿಕ ಗುರಿ ಎಷ್ಟು; ಸಾಧಿಸಲಾದ ಸಾಧನೆ ಎಷ್ಟು? (ವಿವರ ನೀಡುವುದು)

## ಬೆಳಗಾವಿ ವಿಧಾನ ಸಭಾ ಕ್ಷೇತ್ರದ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಬಗ್ಗೆ

**ಶ್ರೀ ಎಂ.ಡಿ ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೯೭೭ (೩೩೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ವಿವಿಧ ಆರೋಗ್ಯ ಕೇಂದ್ರಗಳು ಯಾವುವು; (ಗ್ರಾಮ ಹಾಗೂ ನಗರವಾರು ವಿಳಾಸ ಸಮೇತ ವಿವರ ನೀಡುವುದು)

(ಆ) ಬೆಳಗಾವಿ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಮತ್ಯಾವ ಸರ್ಕಾರಿ ಆಸ್ಪತ್ರೆಗಳಿವೆ; (ಎಲ್ಲೆಲ್ಲಿ ವಿವರ ನೀಡುವುದು)

(ಇ) ಈ ವಿಧಾನ ಸಭಾ ಕ್ಷೇತ್ರದಲ್ಲಿರುವ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದೆಯೇ; (ಹಾಲಿ ಕೆಲಸ ಮಾಡುತ್ತಿರುವ ವೈದ್ಯರು ಸೇರಿದಂತೆ ಸಿಬ್ಬಂದಿ ಬಗ್ಗೆ ವಿಳಾಸ ಸಮೇತ ವಿವರ ನೀಡುವುದು)

(ಈ) ಈ ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳಿಗೆ ಅಗತ್ಯವಿರುವ ಔಷಧಿಗಳು ಲಭ್ಯವಿದೆಯೇ; ಇಲ್ಲದಿದ್ದಲ್ಲಿ, ಕೂಡಲೇ ಒದಗಿಸಲಾಗುವುದೆ;

(ಉ) ಈ ಭಾಗದ ಆಸ್ಪತ್ರೆಗಳನ್ನು ಉನ್ನತೀಕರಣ ಮಾಡಲು ಸರ್ಕಾರ ಯೋಚಿಸಿದೆಯೇ; ಯಾವಾಗ ಮಾಡಲಾಗುವುದು?

## ಬೆಳಗಾವಿ ದಕ್ಷಿಣ ವಿಧಾನ ಸಭಾ ಕ್ಷೇತ್ರದ ಅಂಗನವಾಡಿ ಸಮಸ್ಯೆಗಳ ಬಗ್ಗೆ

**ಶ್ರೀ ಎಂ.ಡಿ ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೯೮ (೩೩೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿರುವ ಒಟ್ಟು ಅಂಗನವಾಡಿಗಳು ಎಷ್ಟು; ಯಾವುವು; (ವಿವರ ನೀಡುವುದು)

(ಆ) ಕ್ಷೇತ್ರದಲ್ಲಿ ಸ್ವಂತ ಕಟ್ಟಡದಲ್ಲಿರುವ ಅಂಗನವಾಡಿಗಳೆಷ್ಟು; ಬಾಡಿಗೆ ಕಟ್ಟಡದಲ್ಲಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು;

(ಇ) ಈ ಅಂಗನವಾಡಿಯ ಶಿಕ್ಷಕರು, ಸಹಾಯಕರು ಹಾಗೂ ಆಶಾ ಕಾರ್ಯಕರ್ತರು ಯಾರ್ಯಾರು; (ವಿಳಾಸ ಸಮೇತ ವಿವರ ನೀಡುವುದು)

(ಈ) ಹೊಸ ಅಂಗನವಾಡಿಗಳಲ್ಲಿ ಎಲ್ಲೆಲ್ಲಿ ಶಿಕ್ಷಕರು ಹಾಗೂ ಸಹಾಯಕರ ಕೊರತೆ ಇದೆಯೇ; ಹಾಗಿದ್ದಲ್ಲಿ, ಕೊರತೆಯನ್ನು ಸರಿಪಡಿಸಲಾಗುವುದು ಯಾವಾಗ;

(ಉ) ಹೊಸ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಜನರಿಂದ ಬೇಡಿಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಮಂಜೂರು ಮಾಡಲು ಉದ್ದೇಶಿಸಿರುವ ಕೇಂದ್ರಗಳ ಸಂಖ್ಯೆ ಎಷ್ಟು? (ಸ್ಥಳವಾರು ವಿವರ ನೀಡುವುದು)

## ಬೆಳಗಾವಿ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಎಂ.ಡಿ ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೯೯ (೩೩೬೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳೆಷ್ಟು; ಯಾವುವು; (ನ್ಯಾಯಬೆಲೆ ಅಂಗಡಿ ಮಾಲೀಕರ ವಿಳಾಸ ಸಮೇತ ವಿವರ ನೀಡುವುದು)

(ಆ) ಕ್ಷೇತ್ರದಲ್ಲಿ ಒಟ್ಟು ಎಷ್ಟು ಬಿ.ಪಿ.ಎಲ್. ಎ.ಪಿ.ಎಲ್. ಮತ್ತು ಅಂತ್ಯೋದಯ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ; (ನಗರ ಮತ್ತು ಗ್ರಾಮವಾರು, ವಿಳಾಸ ಸಮೇತ ಪ್ರತಿಯೊಬ್ಬರ ವಿವರ ನೀಡುವುದು)

(ಇ) ಹೊಸ ನ್ಯಾಯ ಬೆಲೆ ಅಂಗಡಿ ತೆರೆಯಲು ಜನರಿಂದ ಬೇಡಿಕೆ ಬಂದಿದೆಯೇ; ಬಂದಿದ್ದಲ್ಲಿ ಎಲ್ಲೆಲ್ಲಿ ತೆರೆಯಲು ಉದ್ದೇಶಿಸಲಾಗಿದೆ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು; ಯಾವಾಗ ತೆರೆಯಲು ಅನುಮತಿ ನೀಡಲಾಗುವುದು?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿವಿಧ ಯೋಜನೆಯಡಿ ಸೌಲಭ್ಯ ನೀಡಿರುವ ಬಗ್ಗೆ

**ಶ್ರೀ ಎಂ.ಡಿ ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೦೦೦ (೩೩೬೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಐದು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿವಿಧ ಯೋಜನೆಗಳಡಿಯಲ್ಲಿ ನೀಡಲಾಗಿರುವ ಸೌಲಭ್ಯಗಳು ಯಾವುವು; (ಫಲಾನುಭವಿಗಳ ಹೆಸರು, ವಿಳಾಸ ಸಮೇತ ವಿವರ ನೀಡುವುದು)

(ಆ) ಸರ್ಕಾರ ನಿಗಧಿ ಪಡಿಸಿದ ಎಲ್ಲಾ ಸೌಲಭ್ಯಗಳನ್ನು ಆಯಾ ವರ್ಷದಲ್ಲಿ ನೀಡಲಾಗಿದೆಯೇ ; ನೀಡದಿದ್ದರೇ ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ, ನಿಗದಿತ ಸಮಯದಲ್ಲಿ ವಿತರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

## ಭಾಗ್ಯಲಕ್ಷ್ಮೀ ಬಾಂಡ್‌ಗಳ ವಿತರಣೆ ಬಗ್ಗೆ

**ಶ್ರೀ ಎಂ.ಡಿ ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೦೦೧(೩೩೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಐದು ವರ್ಷದಲ್ಲಿ ಭಾಗ್ಯಲಕ್ಷ್ಮೀ ಬಾಂಡ್‌ಗಳನ್ನು ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ; (ಹೆಸರು, ವಿಳಾಸ ಸಮೇತ ವಿವರ ನೀಡುವುದು)

(ಆ) ಈವರೆವಿಗೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ವಿತರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ಅರ್ಜಿ ಸಲ್ಲಿಸಿ ಹಲಾವರು ವರ್ಷಗಳಿಂದ ಬಾಂಡ್ ವಿತರಿಸದೇ ಇರುವ ಸಂಖ್ಯೆ ಎಷ್ಟು ; ಇದಕ್ಕೆ ಕಾರಣವೇನು; ಸರಿಪಡಿಸಲು ಕೈಗೊಂಡ ಕ್ರಮಗಳೇನು; ಸರಿಪಡಿಸಿ ವಿತರಣೆ ಮಾಡಿದ ಬಾಂಡ್‌ಗಳ ಸಂಖ್ಯೆ ಎಷ್ಟು;

(ಈ) ಬಾಂಡ್ ವಿತರಿಸಲು ಇರುವ ಮಾನದಂಡವೇನು?

## ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೨ (೩೪೩೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳಿವೆ; ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಸದರಿ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಮಾಡಿರುವ ಅನುದಾನ ಎಷ್ಟು ; ಆ ಪೈಕಿ ಖರ್ಚಾದ ಮೊತ್ತ ಎಷ್ಟು ;

(ಈ) ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು, ವಿದ್ಯಾರ್ಥಿ ನಿಲಯವಾರು, ಕಾಮಗಾರಿಗಳವಾರು ಮಾಹಿತಿ ನೀಡುವುದು)

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೩ (೩೪೩೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳೇಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅಂಗನವಾಡಿ ಮಕ್ಕಳಿಗೆ ವಿತರಿಸುತ್ತಿರುವ ಪೌಷ್ಟಿಕ ಆಹಾರಗಳು ಯಾವುವು :

(ಇ) ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರೆಷ್ಟು ಮತ್ತು ಹಾಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಈ) ಈ ಅಂಗನವಾಡಿ ಕೇಂದ್ರಗಳಿಗೆ ಪೌಷ್ಟಿಕ ಆಹಾರವನ್ನು ವಿತರಿಸುತ್ತಿರುವ ಹಾಲಿ ಕಂಪನಿ ಯಾವುದು ; ಎಷ್ಟು ವರ್ಷಗಳಿಂದ ಆ ಕಂಪನಿಗೆ ಗುತ್ತಿಗೆ ನೀಡುತ್ತಿದೆ ಮತ್ತು ಅದಕ್ಕಾಗಿ ಸರ್ಕಾರ ಎಷ್ಟು ಅನುದಾನ ಮೀಸಲಿಟ್ಟಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಜಾತಿ ಗಣತಿ ಸಮೀಕ್ಷೆ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೦೪ (೩೩೭೩) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದಿಂದ ಎಲ್ಲಾ ಜಾತಿ ಜನ ಸಂಖ್ಯೆಯನ್ನು ಗುರುತಿಸಲು ಜಾತಿ ಗಣತಿ ಸಮೀಕ್ಷೆ ಮಾಡಿರುವುದು ನಿಜವೇ ;

(ಆ) ಹಾಗಿದ್ದರೆ, ಜಾತಿ ಗಣತಿ ಸಮೀಕ್ಷೆ ಪ್ರಾರಂಭವಾಗಿದ್ದು ಹಾಗೂ ಮುಕ್ತಾಯವಾಗಿದ್ದು ಯಾವಾಗ ; (ವಿವರ ನೀಡುವುದು)

(ಇ) ಇದುವರೆವಿಗೆ ಜಾತಿ ಗಣತಿ ಸಮೀಕ್ಷೆಯ ವರದಿ ಬಿಡುಗಡೆ ಮಾಡದಿರಲು ಕಾರಣವೇನು ; ಇನ್ನು ಎಷ್ಟು ದಿನದಲ್ಲಿ ಬಿಡುಗಡೆ ಮಾಡಲಾಗುವುದು?

## ಅನ್ನ ಭಾಗ್ಯ ಯೋಜನೆಯ ಆಹಾರ ಪದಾರ್ಥಗಳು ನಾಶವಾಗಿರುವ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೦೫ (೩೩೭೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯ ಆಹಾರ ಪದಾರ್ಥಗಳು ಗೋದಾಮುಗಳಲ್ಲಿ ಕೊಳೆತು ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಎಷ್ಟು ಪ್ರಮಾಣದ ಆಹಾರ ಪದಾರ್ಥಗಳು ಗೋದಾಮುಗಳಲ್ಲಿ ಕೊಳೆತು ನಾಶವಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಇದನ್ನು ತಡೆಯಲು ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅನ್ನ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೦೬ (೩೩೭೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಅನ್ನಭಾಗ್ಯ ಯೋಜನೆ ಮತ್ತು ಪಡಿತರ ಧಾನ್ಯ ವಿತರಣೆಯನ್ನು ಜಾರಿಗೆ ತಂದಿರುವುದು ನಿಜವೇ;

(ಆ) ಹಾಗಿದ್ದರೆ, ಆ ಯೋಜನೆಗಳಿಗೆ ಕೇಂದ್ರ ಸರ್ಕಾರ ಅಕ್ಕಿ, ಗೋಧಿ, ಸಕ್ಕರೆ ಇತರೆ ಆಹಾರ ಧಾನ್ಯಗಳನ್ನು ಪೂರೈಕೆ ಮಾಡುತ್ತಿರುವುದು ನಿಜವೇ;

(ಇ) ಆ ಯೋಜನೆಗಳಿಗೆ ೨೦೧೩–೧೪ ರಿಂದ ೨೦೧೭–೧೮ರವರೆಗೆ ಅಕ್ಕಿ, ಗೋಧಿ, ಸಕ್ಕರೆ ಹಾಗೂ ಇತರೆ ಆಹಾರ ಧಾನ್ಯಗಳನ್ನು ಪೂರೈಕೆ ಮಾಡಿರುವ ಒಟ್ಟು ಪ್ರಮಾಣ ಎಷ್ಟು; ಯಾವ ದರದಲ್ಲಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ಪೂರೈಕೆ ಮಾಡುತ್ತಿದೆ; (ವರ್ಷಾವಾರು ಹಾಗೂ ಅಕ್ಕಿ, ಗೋಧಿ, ಸಕ್ಕರೆ ಇತರೆ ಆಹಾರ ಧಾನ್ಯಗಳವಾರು ಪೂರ್ಣ ವಿವರವನ್ನು ನೀಡುವುದು)

(ಈ) ಈ ಧಾನ್ಯಗಳನ್ನು ಯಾವ ದರದಲ್ಲಿ ಗ್ರಾಹಕರಿಗೆ ವಿತರಣೆ ಮಾಡಲಾಗುತ್ತಿದೆ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೦೭ (೩೩೭೧) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿವಿಧ ಅಭಿವೃದ್ಧಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಮತ್ತು ಅಭಿವೃದ್ಧಿ ನಿಗಮಗಳಿಂದ ಹಲವಾರು ಯೋಜನೆಗಳನ್ನು ಸರ್ಕಾರಿ ಹಮ್ಮಿಕೊಂಡಿರುವುದು ನಿಜವೇ;

(ಆ) ಹಾಗಿದ್ದರೆ, ಆ ಕಾರ್ಯಕ್ರಮಗಳ ಪೂರ್ಣ ವಿವರ ನೀಡುವುದು;

(ಇ) ಆ ಪ್ರತಿ ಕಾರ್ಯಕ್ರಮಗಳಿಗೆ ೨೦೧೩-೧೪ ರಿಂದ ೨೦೧೭-೧೮ರವರೆಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು; ಬಿಡುಗಡೆ ಮಾಡಿದ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು; ಫಲಾನುಭವಿಗಳ ಸಂಖ್ಯೆ ಎಷ್ಟು? (ವರ್ಷವಾರು, ಯೋಜನಾವಾರು ಪೂರ್ಣ ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೦೮ (೩೫೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿ ಮಂಜೂರಾದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು; ಅವುಗಳು ಪ್ರಾರಂಭವಾದ ವರ್ಷ ಯಾವುದು; ಈ ಶಾಲೆಗಳಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; ಹುದ್ದೆಗಳ ಭರ್ತಿಗೆ ಸರ್ಕಾರದ ಕ್ರಮವೇನು;

(ಆ) ಉಡುಪಿ ಜಿಲ್ಲೆಯಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಬಾಡಿಗೆ

ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಅವುಗಳು ಪಾವತಿಸುವ ವಾರ್ಷಿಕ ಬಾಡಿಗೆ ಮೊತ್ತವೆಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ಒದಗಿಸುವುದು)

(ಇ) ಸ್ವಂತ ನಿವೇಶನವನ್ನು ಹೊಂದಿಯು, ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳಿಗೆ ನಿವೇಶನ ಮಂಜೂರಾತಿಯಾದ ವರ್ಷ ಯಾವುದು ; ಈ ಶಾಲೆಗಳು ಸ್ವಂತ ನಿವೇಶನ ಮತ್ತು ಕಟ್ಟಡವನ್ನು ಹೊಂದಲು ಸರ್ಕಾರದಿಂದ ಕೈಗೊಂಡ ಕ್ರಮಗಳಾವುವು?

## ಉಡುಪಿ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೭೯ (೩೫೩೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾದ ಪ್ರವಾಸಿ ತಾಣಗಳು ಯಾವುವು; ಇವುಗಳ ಅಭಿವೃದ್ಧಿಗೆ ಮತ್ತು ಮೂಲ ಸೌಕರ್ಯವನ್ನು ಒದಗಿಸಲು ಸರ್ಕಾರದಿಂದ ಕಾಯ್ದಿರಿಸಿದ ಅನುದಾನವೆಷ್ಟು;

(ಆ) ಈ ಪ್ರವಾಸಿ ತಾಣಗಳಿಂದ ಸರ್ಕಾರಕ್ಕೆ ದೊರೆಯುವ ಆದಾಯವೆಷ್ಟು; ಈ ಆದಾಯ ಮತ್ತು ವೆಚ್ಚವನ್ನು ಸರಿದೂಗಿಸಲು ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು ಯಾವುವು;

(ಇ) ಈ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸದೇ ಇರಲು ಕಾರಣವೇನು; ಅಭಿವೃದ್ಧಿಗೆ ಸರ್ಕಾರದ ಕಾರ್ಯ ಪ್ರಯೋಗಗಳು ಯಾವುವು?

## ತೃತೀಯ ಲಿಂಗಗಳು ಮತ್ತು ಹೆಚ್‌ಐವಿ ಸೋಂಕಿತರಿಗೆ ವೈದ್ಯಕೀಯ ಸೌಲಭ್ಯ ಒದಗಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೦ (೩೫೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದಿಂದ ತೃತೀಯ ಲಿಂಗಗಳು ಮತ್ತು ಹೆಚ್‌ಐವಿ ಸೋಂಕಿತರಿಗೆ ದೊರಕುತ್ತಿರುವ ಸವಲತ್ತುಗಳು ಯಾವುವು; ಹೆಚ್‌ಐವಿ ಸೋಂಕಿತರ ಪೋಷಕರಿಗೆ ಸರ್ಕಾರದಿಂದ ದೊರಕುತ್ತಿರುವ ಸವಲತ್ತುಗಳು ಯಾವುವು;

(ಆ) ಆರ್ಥಿಕವಾಗಿ ದುರ್ಬಲವಾಗಿರುವ ತೃತೀಯ ಲಿಂಗಗಳು ಮತ್ತು ಹೆಚ್‌ಐವಿ ಸೋಂಕಿತರ ವೈದ್ಯಕೀಯ ಚಿಕಿತ್ಸೆಗೆ ನೆರವಾಗುವಂತೆ ವಿಶೇಷ ಆರೋಗ್ಯ ಹಾಡನ್ನು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಸರ್ಕಾರದಿಂದ ನೀಡಲಾದ ಬದಲಿ ವ್ಯವಸ್ಥೆ ಯಾವುದು;

(ಇ) ಸ್ಥಳೀಯವಾಗಿಯೇ ವೈದ್ಯಕೀಯ ಸೇವೆ ದೊರಕಲು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವಿಶೇಷ ವಾರ್ಡ್‌ನ್ನು ತೆರೆಯಲು ಸರ್ಕಾರವು ಉದ್ದೇಶಿಸಿದೆಯೇ; ಇಲ್ಲವಾದಲ್ಲಿ ಕಾರಣವೇನು?

## ರಾಜ್ಯ ರಾಜ್ಯೋತ್ಸವ ಪ್ರಶಸ್ತಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೧ (೩೫೩೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆಗೆ ಇರುವ ಮಾನದಂಡಗಳು ಯಾವುವು; ೨೦೧೭-೧೮ನೇ ಸಾಲಿನಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರ ಸಂಖ್ಯೆ ಎಷ್ಟು; ಅವರ ಸಾಧನೆಯ ವಿವರ ಒದಗಿಸುವುದು;

(ಆ) ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ರಾಜ್ಯೋತ್ಸವ ಪ್ರಶಸ್ತಿಗೆ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು; ಅವುಗಳಲ್ಲಿ ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳನ್ನು ತಿರಸ್ಕೃತಗೊಳಿಸಲು ಕಾರಣವೇನು;

(ಇ) ೨೦೧೭-೧೮ನೇ ಸಾಲಿನಲ್ಲಿ ಪ್ರಶಸ್ತಿಗಾಗಿ ಅರ್ಜಿಯನ್ನು ಸಲ್ಲಿಸಿ ಆಯ್ಕೆಯಾದ ನಂತರ ಪ್ರಶಸ್ತಿಯನ್ನು ತಿರಸ್ಕರಿಸಿದವರ ಸಂಖ್ಯೆ ಎಷ್ಟು; ಅರ್ಜಿಯನ್ನು ಸಲ್ಲಿಸದೇ ಪ್ರಶಸ್ತಿಯ ಆಯ್ಕೆಯ ನಂತರ ಪ್ರಶಸ್ತಿಯನ್ನು ತಿರಸ್ಕರಿಸಿದವರ ಸಂಖ್ಯೆ ಎಷ್ಟು?

## ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೧೨ (೩೪೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸರ್ಕಾರದ ವತಿಯಿಂದ ೨೦೧೫-೧೬, ೨೦೧೬-೧೭ನೇ ಸಾಲಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹೊಸ ಕಟ್ಟಡ ನಿರ್ಮಾಣ ಮಾಡಲಾಗಿದೆ;

(ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹೊಸ ಕಟ್ಟಡ ನಿರ್ಮಾಣ ಮಾಡಲು ತಗಲುವ ವೆಚ್ಚವೆಷ್ಟು; (ವಿವರ ನೀಡುವುದು)

(ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹೊಸ ಕಟ್ಟಡ ನಿರ್ಮಾಣ ಮಾಡುವಾಗ ಅಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಹಾಗೂ ಸಿಬ್ಬಂದಿ ವರ್ಗದವರಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗಿದೆಯೇ; (ವಿವರ ನೀಡುವುದು)

(ಈ) ವಸತಿ ಗೃಹಗಳನ್ನು ನಿರ್ಮಾಣ ಮಾಡದೇ ಇರುವ ಗ್ರಾಮ ಪಂಚಾಯಿತಿಗಳಲ್ಲಿ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

## ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಹಾಸ್ಟೆಲ್‌ಗಳ ಸಂಖ್ಯೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೩ (೩೪೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದವರೆಗಿನ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಸದರಿ ಹಾಸ್ಟೆಲ್‌ಗಳಲ್ಲಿ ಸೇರ್ಪಡೆಗೊಂಡಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವರ್ಗಾವಾರು ವಿವರ ನೀಡುವುದು)

(ಆ) ಸದರಿ ಹಾಸ್ಟೆಲ್‌ಗಳಿಗೆ ೨೦೧೫–೧೬, ೨೦೧೬–೧೭ನೇ ಸಾಲುಗಳಲ್ಲಿ ಪ್ರತಿಯೊಂದು ಹಾಸ್ಟಲ್‌ಗಳು ಪಡೆದಿರುವ ಆಹಾರ ವಸ್ತುಗಳ ಜಿಲ್ಲಾವಾರು ವಿವರ ನೀಡುವುದು ;

(ಇ) ಸದರಿ ಹಾಸ್ಟೆಲ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೈಕಿ ತೇರ್ಗಡೆ ಹೊಂದಿರುವ ಹಾಗೂ ನಪಾಸಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ರಾಜ್ಯದ ಎಲ್ಲಾ ಹಾಸ್ಟೆಲ್‌ಗಳಿರುವ ವಿದ್ಯಾರ್ಥಿಗಳಿಗೆ ಹಾಸಿಗೆ ಮತ್ತು ದಿಂಬುಗಳನ್ನು ಒದಗಿಸುವ ಸಂಸ್ಥೆಯವರ ಜಿಲ್ಲಾವಾರು ವಿವರ ನೀಡುವುದು?

## ಗೋದಾಮಿನಲ್ಲಿ ಆಹಾರ ಧಾನ್ಯ ಹಾಳಾಗುತ್ತಿರುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೪ (೩೩೬೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಗೋದಾಮಿನಲ್ಲಿ ಕೊಳೆತು ಹಾಳಾಗಿರುವ ಪಡಿತರ ಆಹಾರ ಧಾನ್ಯಗಳು ಯಾವುವು; ಇವುಗಳ ಪ್ರಮಾಣವೆಷ್ಟು; (ಗೋದಾಮುವಾರು, ಆಹಾರ ಧಾನ್ಯವಾರು ಸಂಪೂರ್ಣ ವಿವರ ನೀಡುವುದು)

(ಆ) ಆಗಿದ್ದಲ್ಲಿ, ಇಂತಹ ಪ್ರಕರಣಗಳು ಪುನರಾವರ್ತನೆಗೊಳ್ಳದಂತೆ ತಡೆಗಟ್ಟಲು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಭ್ರಷ್ಟಾಚಾರ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೧೫ (೩೩೬೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಆರೋಗ್ಯ ಇಲಾಖೆಯಿಂದ ನಿಯೋಜನೆ ಮೇರೆಗೆ ನೇಮಕವಾಗಿರುವ ಸಿಬ್ಬಂದಿಗಳು ಎಷ್ಟು; ಹುದ್ದೆವಾರು, ಮಾತೃ ಇಲಾಖೆ ಅವಧಿ ಹಾಗೂ ಇವರುಗಳ ನಿಯೋಜನೆಯ ಕಾಲಮಿತಿಯ ಸಂಪೂರ್ಣ ವಿವರ ನೀಡುವುದು;

(ಆ) ಈ ರೀತಿ ನಿಯೋಜನೆಗೊಂಡವರ ಕಾಲಾವಧಿಯು ಮುಗಿದಿದ್ದರೂ ಇನ್ನೂ ಸಂಸ್ಥೆಯಲ್ಲೇ ಕರ್ತವ್ಯ ನಿರ್ವಹಿಸುತ್ತಿರಲು ಕಾರಣಗಳೇನು; (ಸಿಬ್ಬಂದಿವಾರು ಸಂಪೂರ್ಣ ವಿವರ ನೀಡುವುದು)

(ಇ) ನಿಯೋಜನೆ ಮೇರೆಗೆ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಭ್ರಷ್ಟಾಚಾರದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹವರುಗಳ ವಿರುದ್ಧ ಕೈಗೊಂಡಿರುವ ಕ್ರಮಗಳಾವುವು; (ಹೆಸರು ಸಹಿತ ಪ್ರಕರಣವಾರು ವಿವರ ನೀಡುವುದು)

(ಈ) ಇಂತಹ ಸಿಬ್ಬಂದಿಗಳನ್ನು ಅವರ ಮಾತೃ ಇಲಾಖೆಗೆ ವಾಪಸ್ಸು ಕಳುಹಿಸದೇ ಇನ್ನೂ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಟ್ಟಿರಲು ಕಾರಣವೇನು; ಈ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿ ಸೌಲಭ್ಯಗಳು ಇಲ್ಲದಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೬ (೩೩೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯಗಳು ಇಲ್ಲದೇ ರೋಗಿಗಳು ಪರದಾಡುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ವಿಷಯವಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಈ ಆಸ್ಪತ್ರೆಯ ಸಿಬ್ಬಂದಿಗಳು ರೋಗಿಗಳಿಗೆ ಸರಿಯಾಗಿ ಸ್ಪಂದಿಸದೇ ಇರುವ ಬಗ್ಗೆ ಅನೇಕ ಬಾರಿ ದಿನಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ಪ್ರಕಟಣೆ/ಪ್ರಸಾರವಾಗಿದ್ದರೂ ಮೇಲಾಧಿಕಾರಿಗಳು ಯಾವುದೇ ಕ್ರಮಗೊಳ್ಳದೇ ಇರುವುದಕ್ಕೆ ಕಾರಣಗಳೇನು;

(ಈ) ಈ ಆಸ್ಪತ್ರೆಯಲ್ಲಿ ಅನೇಕ ಯಂತ್ರೋಪಕರಣಗಳು ಪದೇ ಪದೇ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಅವಧಿಯೊಳಗೆ ಹಾಳಾಗಿರುತ್ತದೆ ಹಾಗೂ ಇದನ್ನು ಯಾವ ಕಾಲಮಿತಿಯಲ್ಲಿ ಸರಿಪಡಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ಹಳೆಯ ಕಟ್ಟಡಗಳನ್ನು ಪಾರಂಪರಿಕ ಕಟ್ಟಡಗಳೆಂದು ಘೋಷಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧೭ (೩೩೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಹಳೆಯ ಕಟ್ಟಡಗಳನ್ನು ಪಾರಂಪರಿಕ ಕಟ್ಟಡ ಎಂದು ಘೋಷಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಆ) ಪಾರಂಪರಿಕ ಕಟ್ಟಡ ಎಂದು ಘೋಷಿಸಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ; (ಸ್ಪಷ್ಟ ಮಾಹಿತಿ ನೀಡುವುದು)

(ಇ) ಬೀದರ್ ನಗರದಲ್ಲಿರುವ ಪಾರಂಪರಿಕ ಕಟ್ಟಡಗಳು ಯಾವುವು ; (ವಿವರ ನೀಡುವುದು)

(ಈ) ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಿಸಲು ಅವುಗಳ ನಿರ್ವಹಣೆಗಾಗಿ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿನ ಸಾಂಕ್ರಾಮಿಕ ರೋಗಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೧೮ (೩೩೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ವಿವಿಧ ಸಾಂಕ್ರಾಮಿಕ ರೋಗಗಳ ಸೋಂಕಿನಿಂದ ಬಳಲುತ್ತಿರುವ ಜನರ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಸಾಂಕ್ರಾಮಿಕ ರೋಗಗಳ ಗುಣಲಕ್ಷಣಗಳೇನು ; ಈ ರೋಗಗಳನ್ನು ಹತೋಟಿಗೆ ತರಲು ಹಾಗೂ ಜನರಿಗೆ ಅರಿವು ಮೂಡಿಸಲು ತೆಗೆದುಕೊಂಡ ಕ್ರಮಗಳಾವುವು ;

(ಇ) ಎಂತಹ ಸಾಂಕ್ರಾಮಿಕ ರೋಗಗಳ ಚಿಕಿತ್ಸೆಗೆ ವೈದ್ಯಾಧಿಕಾರಿಗಳ ತಂಡ ಸ್ಥಾಪಿಸಲಾಗಿದೆಯೇ ; (ಸ್ಪಷ್ಟ ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ಸಾಂಕ್ರಾಮಿಕ ರೋಗಗಳನ್ನು ತಡೆಯಲು ಜಿಲ್ಲಾಡಳಿತ ತೆಗೆದುಕೊಂಡ ಕ್ರಮಗಳೇನು ;

(ಉ) ಕಳೆದ ೩ ವರ್ಷಗಳಿಂದ ಸಾಂಕ್ರಾಮಿಕ ರೋಗಗಳಿಗೆ ಬಲಿಯಾದವರ ಸಂಖ್ಯೆ ಎಷ್ಟು ? (ತಾಲ್ಲೂಕು ಆಸ್ಪತ್ರೆಗಳವಾರು ವಿವರ ನೀಡುವುದು)

## ರಾಜ್ಯದಲ್ಲಿ ಶಿಶುಗಳ ಮರಣ ಪ್ರಮಾಣದಲ್ಲಿ ಏರಿಕೆ ಉಂಟಾಗಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೦೯೯ (೩೪೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ನವಜಾತ ಶಿಶುಗಳ ಮರಣ ಉಂಟಾಗಿದೆ ; (ಜಿಲ್ಲಾವಾರು ಅಂಕಿ–ಅಂಶ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಶಿಶುಗಳ ಮರಣ ಪ್ರಮಾಣವು ಏರಿಕೆಯಾಗಿರುವುದು ನಿಜವೇ ; ನಿಜವಾಗಿದ್ದಲ್ಲಿ, ಪ್ರಮುಖ ಕಾರಣಗಳೇನು ? (ವಿವರ ನೀಡುವುದು)

## ವಿಧವೆಯರನ್ನು ಹರಾಜು ಹಾಕುವ ಅನಿಷ್ಠ ಪದ್ಧತಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೦೨೦ (೩೪೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಮಾಯಕ ಹಾಗೂ ಅಬಲೆಯರಾದ ವಿಧವೆಯರನ್ನು ಹರಾಜು ಹಾಕುವ ಅನಿಷ್ಠ ಪದ್ಧತಿ ಜಾರಿಯಲ್ಲಿರುವುದು ನಿಜವೇ ; ನಿಜವಾಗಿದ್ದಲ್ಲಿ, ಯಾವ ಪ್ರದೇಶಗಳಲ್ಲಿ ಜಾರಿಯಲ್ಲಿದೆ ;

(ಆ) ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿ ವಿಧವೆಯರನ್ನು ಹರಾಜು ಹಾಕುವ ಅನಿಷ್ಠ ಪದ್ಧತಿ ಚಾಲ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ;

(ಇ) ಈ ಅನಿಷ್ಠ ಪದ್ಧತಿಯನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಯಾವ ರೀತಿಯ ಜಾಗೃತಿಯ ಕಾರ್ಯಕ್ರಮಗಳನ್ನು ನಡೆಸಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಚೀನಾದ ತೂಕದ ಯಂತ್ರಗಳ ಮಾರಾಟ ಮತ್ತು ಉಪಯೋಗದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೦೨೧ (೩೪೧೫) ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೂಕ ಯಂತ್ರದ ಉತ್ಪಾದನೆ, ಮಾರಾಟ ಹಾಗೂ ದುರಸ್ಥಿ ಮಾಡಲು ಇರುವ ಕಾನೂನುಗಳೇನು ; (ವಿವರ ನೀಡುವುದು)

(ಆ) ಚೀನಾದಿಂದ ತರಿಸಿದ ತೂಕದ ಯಂತ್ರಗಳನ್ನು ಉಪಯೋಗಿಸುವುದು ಕಾನೂನು ಬಾಹಿರವೇ ;

(ಇ) ರಾಜ್ಯದ ಮಾರುಕಟ್ಟೆಯಲ್ಲಿ ಚೀನಾದ ತೂಕದ ಯಂತ್ರಗಳು ಮಾರಾಟವಾಗುತ್ತಿರುವುದು ಹಾಗೂ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಸಂಬಂಧ ಎಷ್ಟು ಪ್ರಕರಣಗಳು ದಾಖಲಾಗಿವೆ ; ವಿವರ ನೀಡುವುದು ; ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ?

## ಯುನಿವರ್ಸಲ್ ಹೆಲ್ತ್ ಕಾರ್ಡ್ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೦೨೨ (೩೪೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ನಾಗರಿಕರಿಗೆ ಆರೋಗ್ಯ ಭಾಗ್ಯ ಒದಗಿಸುವ ನಿಟ್ಟಿನಲ್ಲಿ ಯುನಿವರ್ಸಲ್ ಹೆಲ್ತ್ ಕಾರ್ಡ್ ನೀಡಲು ಸರ್ಕಾರ ಮುಂದಾಗಿರುವುದು ನಿಜವೇ ;

(ಆ) ಈ ಯೋಜನೆಯ ಅನುಷ್ಠಾನಕ್ಕೆ ಮುಂದಾಗಲು ಕಾರಣವೇನು ; (ವಿವರ ನೀಡುವುದು)

(ಇ) ಸದರಿ ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿದೆ ; ಈ ಯೋಜನೆಯಡಿಯಲ್ಲಿ ಯಾವ ಯಾವ ವರ್ಗದ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ;

(ಈ) ಇದಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ?

## ಹಾವೇರಿ ಜಿಲ್ಲೆಯ ಹಾಸ್ಟೆಲ್‌ಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೨೩ (೩೩೯೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ವಿಧಾನ ಸಭಾ ಕ್ಷೇತ್ರವಾರು ಹೆಸರು, ವಿಳಾಸ ಸಹಿತ ವಿವರ ನೀಡುವುದು ;

(ಆ) ಈ ಹಾಸ್ಟೆಲ್‌ಗಳು ಯಾವ ಯಾವ ವರ್ಷದಲ್ಲಿ ಪ್ರಾರಂಭವಾಗಿವೆ ; ೨೦೧೩–೧೪ ರಿಂದ ೨೦೧೭–೧೮ನೇ ಸಾಲಿನವರೆಗೆ ಈ ಹಾಸ್ಟೆಲ್‌ಗಳಿಗೆ ಸರ್ಕಾರದಿಂದ ಮಂಜೂರಾದ ಅನುದಾನ ಎಷ್ಟು ; ಯಾವ ಯಾವ ಕೆಲಸಕ್ಕೆ ಎಷ್ಟು ಹಣ ಮಂಜೂರಾಗಿದೆ ; ಹಾಗೂ ಖರ್ಚಾಗಿದೆ ; ಪ್ರಗತಿ ಯಾವ ಹಂತದಲ್ಲಿದೆ ? (ಕ್ಷೇತ್ರಾವಾರು ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಿಂದ ಹಾವೇರಿ ಜಿಲ್ಲೆಗೆ ಒದಗಿಸಲಾಗಿರುವ ಅನುದಾನ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೨೪ (೩೪೨೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ ರಿಂದ ೨೦೧೮–೧೯ನೇ ಸಾಲಿನ ವರೆಗೆ ಸಮಾಜ ಕಲ್ಯಾಣ ಇಲಾಖೆಗೆ ಒದಗಿಸಿದ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಇಲಾಖೆಯ ಯೋಜನೆಗಳಾವುವು ;

(ಇ) ಈ ಯೋಜನೆಗಳ ಅಡಿಯಲ್ಲಿ ಹಾವೇರಿ ಜಿಲ್ಲೆಗೆ ಮಂಜೂರಾದ ಅನುದಾನ ಎಷ್ಟು ; (ಯೋಜನೆವಾರು ವಿವರ ನೀಡುವುದು)

(ಈ) ಮಂಜೂರಾದ ಹಣವನ್ನು ಯಾವ ಯಾವ ಕೆಲಸಕ್ಕೆ ವಿನಿಯೋಗಿಸಲಾಗಿದೆ ; ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿವೆ ? (ವಿಧಾನ ಸಭಾ ಕ್ಷೇತ್ರಾವಾರು ಕಾಮಗಾರಿವಾರು ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡುದಾರರ ಮಾಹಿತಿ ಮತ್ತು ವಿತರಿಸುತ್ತಿರುವ ಆಹಾರ ಪದಾರ್ಥದ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೨೫ (೩೪೦೪) ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಬಿ.ಪಿ.ಎಲ್. ಕಾರ್ಡು ಹೊಂದಿರುವವರ ಸಂಖ್ಯೆ ಎಷ್ಟು ; ಹಾಲಿ ಬಿ.ಪಿ.ಎಲ್. ಕಾರ್ಡು ಪಡೆಯಲು ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ; (ವಿಧಾನ ಸಭಾ ಕ್ಷೇತ್ರವಾರು ವಿವರ ಒದಗಿಸುವುದು)

(ಆ) ಅರ್ಜಿ ಸಲ್ಲಿಸಿ ಹಲವಾರು ತಿಂಗಳುಗಳಿಂದ ಅರ್ಜಿದಾರರಿಗೆ ಕಾರ್ಡ್ ದೊರಕದೇ ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು ; ಈ ನಿಟ್ಟಿಯಲ್ಲಿ ಕೈಗೊಂಡ ಸುಧಾರಣಾ ಕ್ರಮಗಳೇನು ;

(ಇ) ಬೆಂಗಳೂರು ನಗರದಲ್ಲಿ ಬಿ.ಪಿ.ಎಲ್. ಕಾರ್ಡುದಾರರಿಗೆ ಯಾವ ಯಾವ ಆಹಾರ ಸಾಮಗ್ರಿಗಳನ್ನು ಎಷ್ಟು ಪ್ರಮಾಣದಲ್ಲಿ ವಿತರಿಸಲಾಗುತ್ತಿದೆ ? (ಮಾಹೆಯಾನ ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಡಯಾಲಿಸಿಸ್ ಕೇಂದ್ರಗಳು ಹಾಗೂ ತೆರೆಯಲು ಆಗುವ ವೆಚ್ಚ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೨೬ (೩೪೦೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದೀಚೆಗೆ ಸರ್ಕಾರದ ವತಿಯಿಂದ ಪ್ರಾರಂಭಗೊಂಡ ಹೊಸ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಪ್ರತಿ ಡಯಾಲಿಸಿಸ್ ಕೇಂದ್ರವನ್ನು ತೆರೆಯಲು ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು) ಈ ಚಿಕಿತ್ಸೆಗಾಗಿ ವಿಧಿಸಲಾಗುತ್ತಿರುವ ಶುಲ್ಕ ಎಷ್ಟು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ವರ್ಷವೊಂದಕ್ಕೆ ಡಯಾಲಿಸಿಸ್ ಚಿಕಿತ್ಸೆಗೊಳಪಡುತ್ತಿರುವವರ ಸಂಖ್ಯೆ ಎಷ್ಟು ; ಇದರಿಂದ ಸರ್ಕಾರಕ್ಕೆ ತಗಲುವ ವರ್ಷವಾರು ವೆಚ್ಚವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಸ್ಥಾಪನೆಯಾಗಿರುವ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕ ಹಾಗೂ ಶುಶ್ರೂಷಕಿಯವರಿಗೆ ನೀಡುತ್ತಿರುವ ವೇತನ/ ಗೌರವ ಧನದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೩೦೨೭ (೩೪೦೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ, ಕೊಪ್ಪಳ, ರಾಯಚೂರು ಹಾಗೂ ಬೀದರ್ ಜಿಲ್ಲೆಗಳಲ್ಲಿ ವೈದ್ಯಕೀಯ ವಿಜ್ಞಾನ ಸಂಸ್ಥೆಗಳು ಯಾವ ಯಾವ ವರ್ಷದಿಂದ ಕಾರ್ಯಾರಂಭ ಮಾಡಿದೆ ;

(ಆ) ಈ ಆಸ್ಪತ್ರೆಗಳಲ್ಲಿ ಖಾಯಂ ಆಧಾರದ ಮೇಲೆ, ಒಳಗುತ್ತಿಗೆ ಮತ್ತು ಹೊರಗುತ್ತಿಗೆ ಮೇಲೆ ಎಷ್ಟು ಜನ ಸ್ಟೈಫಂಡರಿ ಶುಶ್ರೂಷಕ ಹಾಗೂ ಶುಶ್ರೂಷಕಿಯರು ಕಾರ್ಯ ನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು) ಇವರಿಗೆ ನೀಡಲಾಗುತ್ತಿರುವ ವೇತನ/ಗೌರವಧನ ಎಷ್ಟು ; (ವಿವರ ನೀಡುವುದು)

(ಇ) ಒಳಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ರಾಜ್ಯದ ಬೇರೆ–ಬೇರೆ ಜಿಲ್ಲೆಗಳ ವೈದ್ಯಕೀಯ ವಿಜ್ಞಾನಿ ಸಂಸ್ಥೆಗಳ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ಟೈಫಂಡರಿ ಶುಶ್ರೂಷಕಿಯರಿಗೆ ಒಂದೇ ರೀತಿಯ ಗೌರವಧನ ನೀಡಲಾಗುತ್ತಿದೆಯೇ ; ಅಥವಾ ಇದರಲ್ಲಿ ವ್ಯತ್ಯಾಸವೇನಾದರೂ ಇದೆಯೇ ; ಈ ಕುರಿತು ವಿವರವಾದ ಮಾಹಿತಿ ನೀಡುವುದು ?

## ಧಾರವಾಡದಲ್ಲಿ ಪ್ರಾರಂಭಗೊಂಡಿರುವ "ಟ್ರಿಪಲ್ ಐಟಿ" ಸಂಸ್ಥೆಯ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೩೦೨೮ (೩೪೦೧) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನ ಇಲಾಖೆಯಿಂದ ಧಾರವಾಡದಲ್ಲಿ "ಟ್ರಿಪಲ್ ಐಟಿ" ಸಂಸ್ಥೆಯನ್ನು (ಕೋರ್ಸ್) ಯಾವ ವರ್ಷ ಪ್ರಾರಂಭಿಸಲಾಗಿದೆ ;

(ಆ) ಈ ಹಿಂದಿನ ಶೈಕ್ಷಣಿಕ ವರ್ಷಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಆ ಪೈಕಿ ಕರ್ನಾಟಕದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) "ಟ್ರಿಪಲ್ ಐಟಿ" ಸಂಸ್ಥೆಯ ಮೂಲಕ Campus Interview ನಡೆಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಮಾಹಿತಿ ನೀಡುವುದು ;

(ಈ) ಇಲ್ಲಿಯವರೆಗೆ ಧಾರವಾಡದ "ಟ್ರಿಪಲ್ ಐಟಿ" ಸಂಸ್ಥೆಗೆ ಕೇಂದ್ರ/ ರಾಜ್ಯ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವರ್ಷಾವಾರು ಅನುದಾನದ ವಿವರ ನೀಡುವುದು)

(ಉ) ಧಾರವಾಡದಲ್ಲಿರುವ "ಟ್ರಿಪಲ್ ಐಟಿ" ಸಂಸ್ಥೆ ಸ್ವಂತ ಜಾಗ, ಕಟ್ಟಡ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಹೊಂದಿದೆಯೇ ; ಇಲ್ಲದಿದ್ದಲ್ಲಿ, ಈ ಸೌಲಭ್ಯಗಳನ್ನು ಪೂರೈಸಲಾಗುವುದು ಯಾವಾಗ ?

## ಭಿಕ್ಷಾಟನೆಯನ್ನು ತಡೆಗಟ್ಟುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೦೨೯ (೩೪೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷಾಟನೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಭಿಕ್ಷುಕ ಪುನರ್ವಸತಿ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಭಿಕ್ಷುಕರನ್ನು ಗುರುತಿಸಿ ಪುನರ್ವಸತಿ ಕೇಂದ್ರಗಳಿಗೆ ಬಿಡಲು ಅಗತ್ಯವಿರುವ ಪುನರ್ವಸತಿ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಭಿಕ್ಷಾಟನೆಯನ್ನು ನಿರ್ಮೂಲನೆ ಮಾಡಲು ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳು ಯಾವುವು ?

## ರಾಜ್ಯದಲ್ಲಿರುವ ಬಾಲಕಿಯರ ಮತ್ತು ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೦೩೦ (೩೪೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಬಾಲಕಿಯರ ವಸತಿ ನಿಲಯಗಳು ಮತ್ತು ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಉದ್ಯೋಗಸ್ಥ ಮಹಿಳೆಯರು ಮತ್ತು ವಿದ್ಯಾರ್ಥಿನಿಯರು ಸುಲಭವಾಗಿ ದೌರ್ಜನ್ಯಕ್ಕೆ ಒಳಗಾಗುವುದನ್ನು ತಪ್ಪಿಸಲು ಹೆಚ್ಚು ಹೆಚ್ಚು ವಸತಿ ಗೃಹಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಹಾಗಿದ್ದಲ್ಲಿ, ಹೆಚ್ಚಿನ ಸಂಖ್ಯೆಯ ಬಾಲಕಿಯರ ಮತ್ತು ಉದ್ಯೋಗಸ್ಥ ಮಹಿಳೆಯರ ವಸತಿ ಗೃಹಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮೈಸೂರಿನ ಕನ್ನಡ ಶಾಸ್ತ್ರೀಯ ಭಾಷಾ ಉನ್ನತ ಅಧ್ಯಯನ ಕೇಂದ್ರದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೦೩೧ (೩೪೪೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದ ಅಧೀನದಲ್ಲಿ 'ಕನ್ನಡ ಶಾಸ್ತ್ರೀಯ ಭಾಷಾ ಉನ್ನತ ಅಧ್ಯಯನ ಕೇಂದ್ರವು' ಯಾವಾಗಿನಿಂದ ಕಾರ್ಯನಿರ್ವಹಿಸುತ್ತಿದೆ ;

(ಆ) ಈ ಅಧ್ಯಯನ ಕೇಂದ್ರವನ್ನು ಬೆಂಗಳೂರಿಗೆ ಸ್ಥಳಾಂತರಿಸಲು ಸರ್ಕಾರ ಉದ್ದೇಶಿಸಿದೆಯೇ;

(ಇ) ಬೆಂಗಳೂರಿನಲ್ಲಿ ಈ ಅಧ್ಯಯನ ಕೇಂದ್ರವನ್ನು ಸ್ಥಾಪಿಸಲು ಕನಿಷ್ಠ ಕಛೇರಿಗೆ ಜಾಗವು ಸಿಗದಿರುವಾಗ ಮೈಸೂರಿನಿಂದ ಸ್ಥಳಾಂತರ ಮಾಡುವ ಉದ್ದೇಶವೇನು;

(ಈ) ಈ ಅಧ್ಯಯನ ಕೇಂದ್ರವನ್ನು ಮೈಸೂರಿನಲ್ಲೆ ಮತ್ತಷ್ಟು ಅಭಿವೃದ್ಧಿ ಪಡಿಸಿ ಮುಂದುವರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ?

## ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗೆ ಹಂಚಿಕೆಯಾದ ಅನುದಾನ ಬಳಕೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೦೩೨ (೩೪೪೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ಪ್ರಸಕ್ತ ಸಾಲಿನಲ್ಲಿ SCSP, TSP ಯೋಜನೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗಾಗಿ ಹಂಚಿಕೆ ಮಾಡಲಾದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹಂಚಿಕೆ ಮಾಡಲಾದ ಅನುದಾನದಲ್ಲಿ ಇಲ್ಲಿಯವರೆಗೆ ಖರ್ಚಾಗಿರುವ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೧೬-೧೭ನೇ ಸಾಲಿನಲ್ಲಿ ಈ ಯೋಜನೆಗಳಲ್ಲಿನ ಅನುದಾನವು ಪೂರ್ಣ ಪ್ರಮಾಣದಲ್ಲಿ ಬಳಕೆಯಾಗಿದೆಯೇ; ಇಲ್ಲವಾದಲ್ಲಿ, ಈ ಉಳಿಕೆ ಅನುದಾನವನ್ನು ಹೇಗೆ ಬಳಸಿಕೊಳ್ಳಲಾಗುವುದು;

(ಈ) ಪ್ರಸಕ್ತ ಸಾಲಿನ (೧೭-೧೮) ಅನುದಾನವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಮಂಡ್ಯ ಜಿಲ್ಲೆಯ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೦೩೩ (೩೪೪೯) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಎಷ್ಟು ಪ್ರವಾಸಿ ತಾಣಗಳಿವೆ; (ವಿವರ ನೀಡುವುದು)

(ಆ) ಈ ಪ್ರವಾಸಿ ತಾಣಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳು ಸಮರ್ಪಕವಾಗಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಪ್ರವಾಸಿ ತಾಣಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಿ (ಬಸ್, ನೀರು ಶೌಚಾಲಯ, ವಸತಿ ಗೃಹ) ಸಮಗ್ರ ಅಭಿವೃದ್ಧಿ ಪಡಿಸಲು ಸರ್ಕಾರ ಯೋಜನೆ ರೂಪಿಸಿದೆಯೇ; ರೂಪಿಸಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕೈಗೊಳ್ಳಲಾಗುವುದು;

(ಈ) ಈ ತಾಣಗಳ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಪಡಿತರ ಚೀಟಿ ರದ್ದು ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೦೩೪ (೩೪೬೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಕೊಪ್ಪಳದಲ್ಲಿ ನಡೆದ ಹಲವು ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆಯ ಬೃಹತ್ ಸಮಾವೇಶಕ್ಕೆ ಫಲಾನುಭವಿಗಳನ್ನು ಬಲವಂತವಾಗಿ ಕರೆ ತಂದಿರುವುದು ನಿಜವೇ;

(ಆ) ಸಮಾವೇಶಕ್ಕೆ ಹಾಜರಾಗದಿದ್ದಲ್ಲಿ ಫಲಾನುಭವಿಗಳ ಪಡಿತರ ಚೀಟಿಗಳನ್ನು ರದ್ದುಗೊಳಿಸುವುದಾಗಿ ಬೆದರಿಕೆ ಹಾಕಿರುವುದು ನಿಜವೇ;

(ಇ) ಈ ರೀತಿ ಬೆದರಿಕೆ ಹಾಕಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸಮಾವೇಶಕ್ಕೆ ಹಾಜರಾಗದ ಫಲಾನುಭವಿಗಳ ಪಡಿತರ ಚೀಟಿ ರದ್ದುಗೊಳಿಸಿದ ಪ್ರಕರಣಗಳಿವೆಯೇ?

## ಖಾಸಗಿ ವೈದ್ಯಕೀಯ ಸಂಸ್ಥೆಗಳ ಟ್ರೇಡ್ ಲೈಸೆನ್ಸ್ ಪಡೆಯುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೦೩೫ (೩೪೨೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಖಾಸಗಿ ವೈದ್ಯಕೀಯ ಸಂಸ್ಥೆ ಪ್ರಾರಂಭಿಸಲು ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ; ತಿರಸ್ಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು; ಯಾವ್ಯಾವ ಕಾರಣಗಳಿಗಾಗಿ ತಿರಸ್ಕರಿಸಲಾಗಿದೆ;

(ಆ) ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೆ ಟ್ರೇಡ್ ಲೈಸೆನ್ಸ್ ಪಡೆಯುವುದರಿಂದ ವಿನಾಯಿತಿ ನೀಡಿ ಸರ್ಕಾರ ಆದೇಶ ಹೊರಡಿಸಿದೆಯೇ; ಹೊರಡಿಸಿದ್ದಲ್ಲಿ, ಇದಕ್ಕೆ ಕಾರಣಗಳೇನು;

(ಇ) ಖಾಸಗಿ ಆಸ್ಪತ್ರೆಗಳ ನಿಯಂತ್ರಣ ವಿಧೇಯಕದಲ್ಲಿ ಈ ವಿಷಯದ ಬಗ್ಗೆ ತಿಳಿಸಲಾಗಿರುವ ಅಂಶಗಳೇನು ?

## ಕೊಡವ ಭಾಷೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೬ (೩೪೮೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡವ ಭಾಷೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಪೂರಕವಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾರ್ಯಕ್ರಮಗಳಿಗೆ ಸರ್ಕಾರ ಒದಗಿಸಿರುವ ಅನುದಾನವೆಷ್ಟು; (ಕಳೆದ ೧೦ ವರ್ಷಗಳ ವಿವರಗಳನ್ನು ಕಾರ್ಯಕ್ರಮವಾರು ನೀಡುವುದು)

(ಇ) ಕೊಡವ ಸಂಸ್ಕೃತಿಯ ಅಧ್ಯಯನ, ಸಂಶೋಧನೆ ಹಾಗೂ ಪ್ರಚಾರ ಇವುಗಳಿಗೆ ಒತ್ತು ನೀಡಿ ಕಾರ್ಯಕ್ರಮ ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಪಡಿತರ ವಿತರಣಾ ಅಂಗಡಿಗಳನ್ನು ಹೆಚ್ಚಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೭ (೩೪೨೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪಡಿತರ ವಿತರಣಾ ಅಂಗಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಪಡಿತರ ವಿತರಣಾ ಅಂಗಡಿಗಳ ವ್ಯಾಪ್ತಿಗೆ ಒಳಪಟ್ಟಿರುವ ಗ್ರಾಮಗಳು ಯಾವುವು; ಆ ಪ್ರತಿ ಗ್ರಾಮವು ಪಡಿತರ ವಿತರಣಾ ಅಂಗಡಿ ಇರುವ ಗ್ರಾಮದಿಂದ ಎಷ್ಟು ದೂರದಲ್ಲಿದೆ ; (ವಿವರ ನೀಡುವುದು)

(ಇ) ಇಲಾಖೆಯ ಮಾನದಂಡಗಳ ಪ್ರಕಾರ ಪಡಿತರ ಅಂಗಡಿ ಹಾಗೂ ವ್ಯಾಪ್ತಿಗೊಳಪಟ್ಟ ಗ್ರಾಮದ ನಡುವಿನ ಗರಿಷ್ಠ ದೂರವೆಷ್ಟು ;

(ಈ) ಜಿಲ್ಲೆಯಲ್ಲಿ ಸದರಿ ದೂರವನ್ನು ಕಡಿಮೆ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಸಲುವಾಗಿ ಹೊಸದಾಗಿ ಅಂಗಡಿಗಳನ್ನು ತೆರೆಯಲಾಗುವುದೇ?

## ಕೊಡಗು ಜಿಲ್ಲೆಯಲ್ಲಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಟ್ಟಡಗಳ ದುರಸ್ಥಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೮ (೩೪೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಒಟ್ಟು ಕಟ್ಟಡಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಕಟ್ಟಡದ ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಕಟ್ಟಡಗಳ ಪೈಕಿ ಸುಸ್ಥಿತಿಯಲ್ಲಿರುವ ಹಾಗೂ ದುರಸ್ಥಿಗೊಳಗಾಗಿರುವ ಕಟ್ಟಡಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಪ್ರತಿ ಕಟ್ಟಡದ ವಿವರ ನೀಡುವುದು)

(ಇ) ಸದರಿ ಕಟ್ಟಡಗಳ ದುರಸ್ಥಿ/ರಿಪೇರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನದ ನವೋದ್ಯಮಗಳ (Start ups) ಸ್ಥಾಪನೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೩೯ (೩೪೨೧) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ನವೋದ್ಯಮಗಳನ್ನು (Start ups) ಸ್ಥಾಪಿಸಲು ಯುವ ಉದ್ಯಮಿಗಳಿಂದ ಅರ್ಜಿಗಳು ಬಂದಿವೆಯೇ;

(ಆ) ಬಂದಿದ್ದಲ್ಲಿ, ಎಷ್ಟು ನವೋದ್ಯಮಗಳ ಸ್ಥಾಪನೆಗೆ ಅನುಮತಿ ನೀಡಲಾಗಿದೆ; ಅವು ಯಾವುವು ;

(ಇ) ಸದರಿ ನವೋದ್ಯಮಗಳ ಸ್ಥಾಪನೆಗೆ ಸರ್ಕಾರ ರೂಪಿಸಿರುವ ನಿಯಮಗಳೇನು ಹಾಗೂ ನೀಡುತ್ತಿರುವ ಸವಲತ್ತುಗಳೇನು; (ನಿಯಮ ಮತ್ತು ಮಾನದಂಡಗಳ ವಿವರ ನೀಡುವುದು)

(ಈ) ಜೈವಿಕ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ಕೊಡಗು ಜಿಲ್ಲೆಯಲ್ಲಿ ವಿಫುಲ ಅವಕಾಶಗಳಿರುವುದರಿಂದ ಅಲ್ಲಿ ನವೋದ್ಯಮಗಳ ಸ್ಥಾಪನೆಗೆ ಒತ್ತು ನೀಡಲಾಗಿದೆಯೇ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಶಾಲಾ ವಂತಿಕೆ ಮರುಪಾವತಿ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೪೦ (೩೪೧೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ ಶಾಲಾ ಕಾಲೇಜುಗಳಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ೨೦೧೩–೧೪ನೇ ಸಾಲಿನಿಂದ ಎಷ್ಟು ವಿದ್ಯಾರ್ಥಿಗಳಿಗೆ ವಂತಿಕೆ ಮತ್ತು ಶುಲ್ಕವನ್ನು ಮರುಪಾವತಿ ಮಾಡಲಾಗಿದೆ;

(ಆ) ಯಾವ ಯಾವ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ವಂತಿಕೆ ಮತ್ತು ಶುಲ್ಕ ಮರುಪಾವತಿ ಮಾಡಲಾಗಿದೆ; ಸಂಸ್ಥೆಯ ಹೆಸರು, ವಿದ್ಯಾರ್ಥಿಗಳ ಹೆಸರು, ಕೋರ್ಸ್ ಮತ್ತು ಎಷ್ಟೆಷ್ಟು ಹಣ ಮರುಪಾವತಿ ಮಾಡಲಾಗಿದೆ ಎಂಬ ಬಗ್ಗೆ ವಿವರ ನೀಡುವುದು;

(ಇ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನೀಡಲಾಗುತ್ತಿದ್ದ ಪೈಲಟ್ ಟ್ರೈನಿಂಗ್, ನರ್ಸಿಂಗ್ ಟ್ರೈನಿಂಗ್, ಫ್ಯಾಷನ್ ಟ್ರೈನಿಂಗ್ ಮತ್ತು ಇತರೆ ಸ್ವಯಂ ಉದ್ಯೋಗ ಆಧಾರಿತ ತರಬೇತಿ ನೀಡುವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ಮಾಡಲಾಗುತ್ತಿದೆಯೇ;

(ಈ) ಹಾಗಿದ್ದಲ್ಲಿ, ಮೇಲ್ಕಂಡ ಕೋರ್ಸ್‌ಗಳ ಫಲಾನುಭವಿಗಳ ಹೆಸರು, ಇದಕ್ಕಾಗಿ ಖರ್ಚು ಮಾಡಲಾದ ವೆಚ್ಚ, ತರಬೇತಿ ಪಡೆದು ಉದ್ಯೋಗದಲ್ಲಿರುವವರ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಅನುದಾನ ಕೋರಿ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೪೧ (೩೪೫೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೨೦೧೮ನೇ ಸಾಲಿನಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ನೀಡಿರುವ ಅನುದಾನ ಎಷ್ಟು; (ತಾಲ್ಲೂಕುವಾರು, ಕಾಮಗಾರಿವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು ; (ತಾಲ್ಲೂಕುವಾರು, ಕಾಮಗಾರಿವಾರು ವಿವರ ನೀಡುವುದು)

(ಇ) ೨೦೧೭-೨೦೧೮ನೇ ಸಾಲಿನಲ್ಲಿ ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಅನುದಾನ ಕೋರಿ ಪ್ರಸ್ತಾವನೆ ಬಂದಿದೆಯೇ; ಬಂದಿದ್ದರೆ, ಯಾವಾಗ ಬಿಡುಗಡೆ ಮಾಡಲಾಗುವುದು?

## ಬೀದರ್ ಜಿಲ್ಲೆಯ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೪೨ (೩೪೫೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸ್ವಂತ ಕಟ್ಟಡದಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗಿದೆ; ಎಷ್ಟು ವಿದ್ಯಾರ್ಥಿಗಳ ಅರ್ಜಿಗಳು ತಿರಸ್ಕಾರವಾಗಿವೆ; ಅರ್ಜಿ ತಿರಸ್ಕಾರಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ಚೀಟಿ ವಿತರಣೆ ನೀಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೪೩ (೩೪೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೨೦೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಸಿರುವ ಅರ್ಜಿದಾರರ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಜನರಿಗೆ ಪಡಿತರ ಚೀಟಿ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪಡಿತರ ಚೀಟಿ ಕೂಪನ್ ನೀಡಲು ಎಷ್ಟು ಕೇಂದ್ರಗಳನ್ನು ಸ್ಥಾಪಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕೂಪನ್‌ನಲ್ಲಿ ನಿಗದಿಯಾದ ಆಹಾರ ಧಾನ್ಯವನ್ನು ಗ್ರಾಹಕರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು?

## ಬೀದರ್ ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೪೪ (೩೪೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಔರಾದ್ ತಾಲ್ಲೂಕು ಆಸ್ಪತ್ರೆಗಳಲ್ಲಿ ಮೂಲಭೂತ ಸೌಲಭ್ಯ ಇಲ್ಲದೆ ರೋಗಿಗಳು ಪರದಾಡುವ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದಲ್ಲಿರುವ ಅಂಗನವಾಡಿ ಮಕ್ಕಳ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೩೦೪೫ (೩೪೨೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗನವಾಡಿ ಯೋಜನಾ ವ್ಯಾಪ್ತಿಗೆ ಬರುವ ಮಕ್ಕಳ ಸಂಖ್ಯೆ ಎಷ್ಟು ; (೦–೩ ಮತ್ತು ೩–೬ ವರ್ಷದ ಪ್ರತ್ಯೇಕ ಲಿಂಗವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಆ) ಈ ಮಕ್ಕಳಲ್ಲಿ ಅಂಗನವಾಡಿಗೆ ದಾಖಲಾದ ಮಕ್ಕಳ ಸಂಖ್ಯೆ ಎಷ್ಟು ; (೦–೩ ಮತ್ತು ೩–೬ ವರ್ಷದ ಪ್ರತ್ಯೇಕ ಲಿಂಗವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಇ) ಈ ಮಕ್ಕಳ ಆರೋಗ್ಯ ಕಲಿಗೆ ಮತ್ತು ದೈಹಿಕ ಹಾಗೂ ಮಾನಸಿಕಾಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಹೆಚ್.ಐ.ವಿ. ಭಾದಿತ ಮಕ್ಕಳ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೩೦೪೬ (೩೪೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೆಚ್.ಐ.ವಿ. /ಏಡ್ಸ್ ಪೀಡಿತ ಮತ್ತು ಬಾಧಿತ ೧೮ ವರ್ಷದೊಳಗಿನ ಮಕ್ಕಳ ಸಂಖ್ಯೆ ಎಷ್ಟು ; (ಗಂಡು, ಹೆಣ್ಣು ಮಕ್ಕಳ ಜಿಲ್ಲಾವಾರು ವಿವರ ನೀಡುವುದು)

(ಆ) ಈ ಮಕ್ಕಳ ಪೋಷಣೆ, ಶಿಕ್ಷಣ, ಪೌಷ್ಠಿಕತೆ ಮತ್ತು ರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ವಿಕಲಾಂಗ ಮಕ್ಕಳ ಅಭಿವೃದ್ಧಿಯ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೩೦೪೭ (೩೪೨೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿಕಲಾಂಗ ಮಕ್ಕಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿರುವ ೧೮ ವರ್ಷದೊಳಗಿನ ವಿಕಲಾಂಗ ಮಕ್ಕಳ ಸಂಖ್ಯೆ ಎಷ್ಟು? (ಲಿಂಗವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಸುಸ್ಥಿರ ಅಭಿವೃದ್ಧಿಯ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೩೦೪೮ (೩೪೨೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಹಾಕಿಕೊಂಡಿರುವ ಯೋಜನೆಗಳೇನು;

(ಆ) ಇದರಲ್ಲಿ ವಿವಿಧ ಇಲಾಖೆಗಳ ಸಂಯೋಜನೆಯನ್ನು ಹೇಗೆ ಸಾಧಿಸಲಾಗಿದೆ ಮತ್ತು ಯಾವ ಯಾವ ಇಲಾಖೆಗಳಿಗೆ ಯಾವ ಜವಾಬ್ದಾರಿಯನ್ನು ನೀಡಲಾಗಿದೆ;

(ಇ) ಈ ಸುಸ್ಥಿರ ಅಭಿವೃದ್ಧಿ ಗುರಿಗಳ ವಿಚಾರಗಳನ್ನು ಗ್ರಾಮಮಟ್ಟದವರೆಗೆ ತಲುಪಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಅನಾಥ ಮಕ್ಕಳ ಹಿತ ರಕ್ಷಣೆ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೩೦೪೯ (೩೪೨೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅನಾಥ ಮಕ್ಕಳ ಸಂಖ್ಯೆ ಎಷ್ಟು ; (೦–೬, ೬–೧೪ ಮತ್ತು ೧೪–೧೮ನೇ ವಯೋಮಿತಿಯ ಪ್ರತ್ಯೇಕ ವಿವರವನ್ನು ಜಿಲ್ಲಾವಾರು ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ದತ್ತು ನೀಡಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ದತ್ತು ನೀಡದೆ ಇರುವ ಮಕ್ಕಳ ಆರೋಗ್ಯ ಪೋಷಣೆ, ರಕ್ಷಣೆ, ಶಿಕ್ಷಣ ಇವೇ ಮೊದಲಾದವುಗಳಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸ್ತ್ರೀ ಸ್ವ ಸಹಾಯ ಸಂಘಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೦ (೩೩೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಸ್ತ್ರೀ ಸ್ವ–ಸಹಾಯು ಸಂಘಗಳು ಯಾವುವು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಇವುಗಳಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಸಂಘಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣ ಎಷ್ಟು ; ಆ ಪೈಕಿ ಖರ್ಚಾಗಿರುವ ಹಣ ಎಷ್ಟು; ಉಳಿಕೆ ಎಷ್ಟು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಪಡಿತರ ಧಾನ್ಯಗಳಿಗೆ ಥಂಬಿಂಗ್ ಪಡೆಯುತ್ತಿರುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೧ (೩೩೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಪಡಿತರ ಅಂಗಡಿಗಳಲ್ಲಿ ಫಲಾನುಭವಿಗಳು ಥಂಬಿಂಗ್ ಮಾಡಲು ಹಣ

ಪಡೆಯುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಈ ಜಿಲ್ಲೆಗಳಲ್ಲಿ ಈವರೆಗೆ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಬಂದಿದ್ದಲ್ಲಿ, ಪಡಿತರ ಅಂಗಡಿವಾರು ಸಂಪೂರ್ಣ ವಿವರ ನೀಡುವುದು ;

(ಇ) ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವ ಅಂಗಡಿ ಮಾಲೀಕರು ಇಲಾಖಾ ಅಧಿಕಾರಿಗಳೊಂದಿಗೆ ಶಾಮೀಲಾಗಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಫಲಾನುಭವಿಗಳು ಪಡೆದ ಹಣವನ್ನು ಹಿಂತಿರುಗಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ರಂಗಮಂದಿರ ಸಾಂಸ್ಕೃತಿಕ ಭವನಗಳ ನಿರ್ಮಾಣದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೨ (೩೩೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ರಂಗಮಂದಿರ, ಸಾಂಸ್ಕೃತಿಕ ಭವನ ನಿರ್ಮಾಣಕ್ಕಾಗಿ ಕಳೆದ ೩ ವರ್ಷಗಳಲ್ಲಿ ವೆಚ್ಚ ಮಾಡಿರುವ ಮೊತ್ತ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ರಂಗಮಂದಿರ, ಸಾಂಸ್ಕೃತಿಕ ಭವನಗಳನ್ನು ಸ್ಥಾಪಿಸಲು ಅನುದಾನ ನೀಡಲು ಇರುವ ಮಾನದಂಡಗಳೇನು ; (ಆದೇಶದ ಪ್ರತಿಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಸಾಂಸ್ಕೃತಿಕ ಭವನ, ರಂಗಮಂದಿರ ಸ್ಥಾಪಿಸಲು ಮೀಸಲಿಟ್ಟಿರುವ ಮೊತ್ತವೆಷ್ಟು;

(ಈ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಗೆ ಮೀಸಲಿಟ್ಟ ಮೊತ್ತ ಎಷ್ಟು ? (ವಿವರ ನೀಡುವುದು)

## ಪರಿಶಿಷ್ಟ ಪಂಗಡ ಪ್ರಮಾಣ ಪತ್ರ ವಿತರಣೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೩ (೩೪೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಪರಿಶಿಷ್ಟ ಪಂಗಡ ಪ್ರಮಾಣ ಪತ್ರಕ್ಕಾಗಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಪೈಕಿ ವಿತರಣೆಯಾದ ಹಾಗೂ ಬಾಕಿ ಉಳಿದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಬಾಕಿ ಇರಲು ಕಾರಣವೇನು ;

(ಇ) ಸದರಿ ಅರ್ಜಿಗಳಲ್ಲಿ ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು; ತಾಲ್ಲೂಕುವಾರು ಕಾರಣ ಸಹಿತ ವಿವರ ನೀಡುವುದು ;

(ಈ) ಪ್ರಮಾಣ ಪತ್ರ ತಿರಸ್ಕೃತಗೊಳ್ಳಲು ಇರುವ ಮುಖ್ಯ ಕಾರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

## ಗೋದಾಮಿನಲ್ಲಿ ಆಹಾರಧಾನ್ಯಗಳು ಕೊಳೆಯುತ್ತಿರುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೪ (೩೩೫೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ಗೋದಾಮಿನಲ್ಲಿ ಕೊಳೆತು ಹಾಳಾಗಿರುವ ಪಡಿತರ ಆಹಾರ ಧಾನ್ಯಗಳು ಯಾವುವು; ಇವುಗಳ ಪ್ರಮಾಣವೆಷ್ಟು ; (ಗೋದಾಮುವಾರು, ಆಹಾರಧಾನ್ಯವಾರು, ಸಂಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಆಹಾರಧಾನ್ಯಗಳು ಹಾಳಾಗಲು ಕಾರಣರಾದವರು ಯಾರು ; ಇವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ರೀತಿಯ ಪ್ರಕರಣಗಳು ಪುನರಾವರ್ತನೆಗೊಳ್ಳದಂತೆ ತಡೆಗಟ್ಟಲು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಚಾಮರಾಜನಗರ ಜಿಲ್ಲೆಯಲ್ಲಿರುವ ಗಿರಿಜನ ಆಶ್ರಯ ಶಾಲೆಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೫ (೩೩೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ಗಿರಿಜನ ಆಶ್ರಮ ಶಾಲೆಗಳ ಸಂಖ್ಯೆ ಎಷ್ಟು ; ಅವುಗಳು ಎಲ್ಲೆಲ್ಲಿವೆ ; ಅವುಗಳಲ್ಲಿ ಹಾಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; (ಪ್ರತಿಯೊಂದು ಆಶ್ರಮ ಶಾಲೆಯ ವಿವರಗಳನ್ನು ಒದಗಿಸುವುದು)

(ಆ) ಸೂಕ್ತ ಶಿಕ್ಷಣ ಸೌಲಭ್ಯವಿಲ್ಲದೆ, ವಿದ್ಯಾರ್ಥಿಗಳ ಕೊರತೆಯಿಂದ ಮುಚ್ಚುವ ಹಂತಕ್ಕೆ ತಲುಪಿರುವ ಗಿರಿಜನ ಆಶ್ರಮ ಶಾಲೆಗಳು ಯಾವುವು ; ಬೈಲೂರು (ಅರ್ಧನಾರಿಪುರ) ಕಂಚಗಳ್ಳಿ ಗಿರಿಜನ ಆಶ್ರಮ ಶಾಲೆಗಳು ಮುಚ್ಚುವ ಹಂತಕ್ಕೆ ಬಂದಿರುವುದು ನಿಜವೇ;

(ಇ) ಈ ಗಿರಿಜನ ಆಶ್ರಮ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಅಡುಗೆಯವರು, ಅಡುಗೆ ಸಹಾಯಕರು ಮತ್ತು ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು) ಈ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದೇ ?

## ಕೊಳ್ಳೇಗಾಲ ಅಂಬೇಡ್ಕರ್ ಭವನ ಕಾಮಗಾರಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೬ (೩೩೯೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಳ್ಳೇಗಾಲದಲ್ಲಿ ನಿರ್ಮಿಸುತ್ತಿರುವ ಅಂಬೇಡ್ಕರ್ ಭವನದಲ್ಲಿ ಯಾವ ಯಾವ ಕಾಮಗಾರಿಗಳು ಬಾಕಿ ಉಳಿದಿವೆ ; ಈ ಕಾಮಗಾರಿಗಳನ್ನು ಯಾವಾಗ ಮುಗಿಸಲು ಕ್ರಮ ತೆಗೆದುಕೊಳ್ಳಲಾಗುವುದು ;

(ಆ) ಈ ಭವನದ ಕಾಮಗಾರಿಯು ೧೨ ವರ್ಷವಾದರೂ ಮುಗಿಯದಿರಲು ಕಾರಣಗಳೇನು ; ಉಳಿದಿರುವ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಿ ಭವನವನ್ನು ಸುಸಜ್ಜಿತಗೊಳಿಸಲು ಕ್ರಮ ಜರುಗಿಸಲಾಗುವುದೇ ?

## ಗುಂಡ್ಲುಪೇಟೆ ತಾಲ್ಲೂಕು ದೇಶಿಪುರ ಹಾಡಿಯಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫೭ (೩೩೯೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗುಂಡ್ಲುಪೇಟೆ ತಾಲ್ಲೂಕು ದೇಶಿಪುರ ಹಾಡಿಯಲ್ಲಿರುವ ಗಿರಿಜನರ ಸಂಖ್ಯೆ ಎಷ್ಟು ; ಇವರಲ್ಲಿ ಎಷ್ಟು ಕುಟುಂಬಕ್ಕೆ ಮನೆಗಳನ್ನು ನಿರ್ಮಿಸಿಕೊಡಲಾಗಿದೆ ; ಮನೆಯ ಉದ್ದಗಲದ ಅಳತೆ ಎಷ್ಟು; ಪ್ರತಿಯೊಂದು ಮನೆಗಳ ನಿರ್ಮಾಣಕ್ಕೆ ತಗುಲಿರುವ ವೆಚ್ಚ ಎಷ್ಟು; ಮನೆಗಳ ನಿರ್ಮಾಣ ಗುಣಮಟ್ಟ ಕಳಪೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೋರ್‌ವೆಲ್‌ನಿಂದ ಐದು ದಿನಗಳಿಗೆ ಒಮ್ಮೆ ನೀರು ತುಂಬಿಸುತ್ತಿದ್ದು ನೀರಿಗೆ ತತ್ವಾರ ಉಂಟಾಗಿರುವುದು, ವಿದ್ಯುತ್ ಸೌಲಭ್ಯ ಇಲ್ಲದಿರುವುದು ಗಮನಕ್ಕೆ ಬಂದಿದೆಯೇ ;

(ಇ) ಗುಂಡ್ಲುಪೇಟೆ ತಾಲ್ಲೂಕಿನ ಪ್ರಮುಖ ಹಾಡಿಯಾಗಿರುವ ದೇಶಿಪುರ ಕಾಲೋನಿಯಲ್ಲಿ ಮೂಲಭೂತಸೌಲಭ್ಯಗಳ ಅಭಿವೃದ್ಧಿ ಮನೆಗಳ ದುರಸ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಸರ್ಕಾರಿ ಆಸ್ಪತ್ರೆಗಳಲ್ಲಿರುವ ಶುಶ್ರೂಷಕರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೫೮ (೩೪೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಎಷ್ಟು ಜನ ಶುಶ್ರೂಷಕರನ್ನು ಖಾಯಂಗೊಳಿಸಲಾಗಿದೆ ; ಬಾಕಿ ಇರುವ ಶುಶ್ರೂಷಕರನ್ನು ಖಾಯಂಗೊಳಿಸಲಾಗುವುದು ಯಾವಾಗ ;

(ಆ) ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಶುಶ್ರೂಷಕರಿಗೆ ಹೆಚ್ಚಿನ ಭತ್ಯೆಯನ್ನು ನೀಡಲಾಗುತ್ತಿದೆಯೇ ; ಇಲ್ಲದಿದ್ದ ಪಕ್ಷದಲ್ಲಿ ಈ ಭತ್ಯೆಯನ್ನು ನೀಡುವುದು ಸಮಂಜಸವಲ್ಲವೇ ;

(ಇ) ಅತ್ಯುತ್ತಮವಾಗಿ ಸಾರ್ವಜನಿಕರಿಗೆ ಸೇವೆಯನ್ನು ಸಲ್ಲಿಸಿರುವ ಸಿಬ್ಬಂದಿಗಳನ್ನು ಗುರುತಿಸಿ ಅವರುಗಳಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸಿ, ಸಿಬ್ಬಂದಿಗಳಿಗೆ ಮನೋಸ್ಥೈರ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು ?

## ಸ್ನಾತಕೋತ್ತರ ಕಾಲೇಜುಗಳ ಸ್ಥಾಪನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೫೯ (೩೪೫೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವೈದ್ಯಕೀಯ ವಿಭಾಗದ ಸರ್ಕಾರಿ ಸ್ನಾತಕೋತ್ತರ (ಪಿ.ಜಿ.) ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳಲ್ಲಿ ಲಭ್ಯವಿರುವ ಸೀಟ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ವೈದ್ಯಕೀಯ ವಿಭಾಗದ ಸ್ನಾತಕೋತ್ತರ ಪದವಿಗೆ ಹೆಚ್ಚಿನ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಹೆಚ್ಚಿನ ಬೇಡಿಕೆಗಳಿಗನುಗುಣವಾಗಿ ವೈದ್ಯಕೀಯ ಸೀಟ್ ಹೆಚ್ಚಿಸಲು ನೂತನವಾಗಿ ಸ್ನಾತಕೋತ್ತರ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರವು ಆಲೋಚಿಸಿದೆಯೇ ?

## ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೦೬೦ (೩೪೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಬಾಡಿಗೆ ಹಣವನ್ನು ಪಾವತಿಸಲು ಸರ್ಕಾರಕ್ಕೆ ಖರ್ಚಾಗುತ್ತಿರುವ ಹಣ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಇ) ಸರ್ಕಾರದ ಜಾಗದಲ್ಲಿ ಅಥವಾ ಸ್ವಂತ ಜಾಗವನ್ನು ಖರೀದಿಸಿ ಆಸ್ಪತ್ರೆಗಳನ್ನು ನಿರ್ಮಾಣ ಮಾಡಲು ಸರ್ಕಾರವು ಆಲೋಚಿಸಿದೆಯೇ ?

## ಆರೋಗ್ಯ ಇಲಾಖೆಗಳ ಟೆಂಡರ್‌ಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೦೬೧ (೩೬೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ದಿನಾಂಕ: ೦೧-೦೪-೨೦೧೭ ರಿಂದ ಇಲ್ಲಿಯವರೆಗೆ ೧೦ ಕೋಟಿ ರೂ.ಗಳಿಗೂ ಮೇಲ್ಪಟ್ಟ ಸಾಮಗ್ರಿಗಳ ಪೂರೈಕೆಗಾಗಿ ಎಷ್ಟು ಟೆಂಡರ್‌ಗಳನ್ನು ಕರೆಯಲಾಗಿರುತ್ತದೆ ; ಸದರಿ ಟೆಂಡರ್‌ಗಳನ್ನು ಸಂಪುಟ ಸಭೆಯ ಅನುಮೋದನೆಗೆ ಒಳಪಟ್ಟು ಕರೆಯಲಾಗಿರುತ್ತದೆಯೇ ;

(ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸಚಿವರ ಒಪ್ಪಿಗೆಯಿಲ್ಲದೇ ಪ್ರಸಕ್ತ ಸಾಲಿನಲ್ಲಿ ಯಾವುದಾದರೂ ಟೆಂಡರ್ ಪ್ರಕ್ರಿಯೆಗೆ ಚಾಲನೆ ನೀಡಲಾಗಿತ್ತೇ ; ಸದರಿ ಟೆಂಡರ್‌ಗಳ ಮೇಲೆ ಗುತ್ತಿಗೆದಾರರಿಗೆ ಹಣವನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ಅಂತಹ ಟೆಂಡರ್‌ಗಳ ಮಾಹಿತಿಯನ್ನು ಒದಗಿಸುವುದು ;

(ಇ) ರಾಜ್ಯ ಸರ್ಕಾರವು ಯೂನಿವರ್ಸಲ್ ವೈದ್ಯ ಯೋಜನೆಯನ್ನು ಯಾವ ಸಮಯದಿಂದ ಜಾರಿಗೊಳಿಸುವುದು ಮತ್ತು ಯಾವ ಯಾವ ವರ್ಗದ ಕುಟುಂಬಗಳು ಈ ಯೋಜನೆಗೆ ಒಳಪಡುತ್ತವೆ; ಈ ಯೋಜನೆಯಲ್ಲಿ ಫಲಾನುಭವಿಗಳಿಗೆ ಎಷ್ಟು ಗರಿಷ್ಟ ಮೊತ್ತದ ವಿಮಾ ಯೋಜನೆ ದೊರೆಯುತ್ತದೆ ;

(ಈ) ಕಳೆದ ಒಂದು ವರ್ಷದಲ್ಲಿ ರಾಜ್ಯ ಸರ್ಕಾರವು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ರಾಜ್ಯದಲ್ಲಿ ತೆರೆದಿರುತ್ತದೆ ; ಮತ್ತು ಸದರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಹುದ್ದೆ ತುಂಬಲಾಗಿದೆಯೇ?

## ಪ್ರಾಧಿಕಾರಗಳಿಗೆ ಅನುದಾನ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೦೬೨ (೩೬೩೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುವ ಪ್ರಾಧಿಕಾರಗಳಿಗೆ ಮತ್ತು ಅಕಾಡೆಮಿಗಳಿಗೆ ಎಷ್ಟು ಅನುದಾನಗಳನ್ನು ಬಿಡುಗಡೆ ಮಾಡಲಾಗಿರುತ್ತದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಎಷ್ಟು

ಸಂಘ ಸಂಸ್ಥೆಗಳಿಗೆ ಕಳೆದ ೨ ವರ್ಷಗಳಲ್ಲಿ ಅನುದಾನಗಳನ್ನು ನೀಡಿರುತ್ತದೆ ; (ಅನುದಾನ ಪಡೆದ ಸಂಸ್ಥೆಗಳ ಮಾಹಿತಿ ನೀಡುವುದು) ಅನುದಾನ ಪಡೆದ ಸಂಘ ಸಂಸ್ಥೆಗಳಿಂದ ಹಣದ ಸಮರ್ಪಕ ಬಳಕೆ ಪ್ರಮಾಣ ಪತ್ರವನ್ನು ಪಡೆಯಲಾಗಿದೆಯೇ ;

(ಇ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಪ್ರತಿ ವರ್ಷ ಕನ್ನಡದಲ್ಲಿ ತೀರ್ಪು ಬರೆದ ಎಷ್ಟು ನ್ಯಾಯಾಧೀಶರಿಗೆ ಗೌರವ ಧನವನ್ನು ಪ್ರಶಸ್ತಿ ರೂಪದಲ್ಲಿ ನೀಡುತ್ತಿದೆ ; ಇಂತಹ ನ್ಯಾಯಾಧೀಶರು ಪೂರ್ಣ ಪ್ರಮಾಣದಲ್ಲಿ ಕನ್ನಡ ತೀರ್ಪುಗಳನ್ನು ಬರೆಯುತ್ತಿರುವ ಕುರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಮಾಹಿತಿ ಇರುತ್ತದೆಯೇ ; ಸದರಿ ಪ್ರಾಧಿಕಾರವು ನ್ಯಾಯಾಲಯದಲ್ಲಿ ಕನ್ನಡದ ಮೂಲಕ ವಕೀಲ ವೃತ್ತಿ ಮಾಡುತ್ತಿರುವ ಎಷ್ಟು ವಕೀಲರಿಗೆ ಪ್ರಶಸ್ತಿಯನ್ನು ನೀಡಿರುತ್ತದೆ; ನೀಡದೇ ಇದ್ದಲ್ಲಿ, ಕಾರಣವೇನು ;

(ಈ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಂಗಳೂರಿನಲ್ಲಿ ಎಷ್ಟು ಕನ್ನಡ ಸಂಸ್ಥೆಗಳಿಗೆ ಮತ್ತು ಕನ್ನಡ ಪರ ಸಂಘಟನೆಗಳಿಗೆ ವಾರ್ಷಿಕ ಅನುದಾನಗಳನ್ನು ನೀಡುತ್ತಿದೆ ; ಇಲಾಖೆಯು ಬೆಂಗಳೂರಿನ ಕನ್ನಡ ಚಳುವಳಿ ಕೇಂದ್ರ ಸಮಿತಿಗೆ ವಾರ್ಷಿಕ ಅನುದಾನ ನೀಡುತ್ತಿದೆಯೇ ; ನೀಡದೇ ಇದ್ದಲ್ಲಿ ಇದನ್ನು ಪರಿಗಣಿಸುವುದೇ?

## ಮಾತೃ ಪೂರ್ಣ ಯೋಜನೆ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೦೬೩ (೩೬೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಮಾತೃಪೂರ್ಣ ಯೋಜನೆಯನ್ನು ಎಂದಿನಿಂದ ಜಾರಿಗೊಳಿಸಲಾಗಿದೆ ; ಪ್ರಸಕ್ತ ಸಾಲಿನ ರಾಜ್ಯ ಆಯವ್ಯಯದಲ್ಲಿ ಹಣ ಎಷ್ಟು ನಿಗದಿ ಮಾಡಲಾಗಿದೆ ; ಮತ್ತು

ಈ ಯೋಜನೆಯನ್ನು ಜಾರಿಗೊಳಿಸಲು ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಮಾತೃಪೂರ್ಣ ಯೋಜನೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಪ್ರತಿ ಊಟಕ್ಕೆ ಸರ್ಕಾರ ನೀಡುವ ಹಣ ಎಷ್ಟು; ಇಡೀ ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು) ಮತ್ತು ಎಷ್ಟು ಸಮಯದವರೆಗೆ ಅವರಿಗೆ ಪೌಷ್ಠಿಕ ಆಹಾರವನ್ನು ಒದಗಿಸಲಾಗುವುದು ;

(ಇ) ಮಾತೃಪೂರ್ಣ ಯೋಜನೆಯಲ್ಲಿ ಫಲಾನುಭವಿಗಳಿಗೆ ನೇರವಾಗಿ ಹಣ ಪಾವತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಸರ್ಕಾರ ಈ ಯೋಜನೆಯಲ್ಲಿ ಖಾಸಗಿ ಸಂಸ್ಥೆಗಳ ಭಾಗಿತ್ವಕ್ಕೆ ಅವಕಾಶ ನೀಡಿದೆಯೇ ;

(ಈ) ಕಳೆದ ೨ ವರ್ಷಗಳಲ್ಲಿ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕೆ ನಿಗಧಿಪಡಿಸಿರುವ ಹಣ ಎಷ್ಟು ; ಮತ್ತು ಎಷ್ಟು ಹಣವನ್ನು ಇಲ್ಲಿಯವರೆಗೆ ಖರ್ಚು ಮಾಡಿರುತ್ತದೆ ; ಹಿರಿಯ ನಾಗರಿಕರ ಸಬಲೀಕರಣಕ್ಕೆ ರಾಜ್ಯ ಸರ್ಕಾರ ಕ್ರಿಯಾ ಯೋಜನೆಯನ್ನು ಹೊಂದಿರುತ್ತದೆಯೇ ; ರಾಜ್ಯದಲ್ಲಿ ಇರುವ ಹಿರಿಯ ನಾಗರಿಕರ ಸಂಖ್ಯೆ ಎಷ್ಟು ?

## ಸಿ.ಇ.ಟಿ ಸೀಟು ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೦೬೪ (೩೬೪೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸಿ.ಇ.ಟಿ ಮುಖಾಂತರ ಎಷ್ಟು ವೈದ್ಯಕೀಯ ಸೀಟುಗಳನ್ನು ತುಂಬಲಾಗಿರುತ್ತದೆ ; ಇವುಗಳಲ್ಲಿ ಮೆರಿಟಿಂಗ್ ಅನುಗುಣವಾಗಿ ಎಷ್ಟು ಸರ್ಕಾರಿ ಸೀಟುಗಳು ಹಾಗೂ ಎಷ್ಟು ಆಡಳಿತ ಮಂಡಳಿಯ ಸೀಟುಗಳನ್ನು ತುಂಬಲಾಗಿರುತ್ತದೆ;

(ಆ) ಸಿ.ಇ.ಟಿ ಮುಖಾಂತರ ಮೆರಿಟ್ ಆಧಾರದ ವೈದ್ಯಕೀಯ ಸೀಟುಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಶೈಕ್ಷಣಿಕ ಶುಲ್ಕವನ್ನು ಪಡೆಯಲಾಗಿರುತ್ತದೆ; ಕರ್ನಾಟಕದಲ್ಲಿ ಸಿ.ಇ.ಟಿ ಮುಖಾಂತರ ಮೆರಿಟ್ ಆಧಾರಿತ ವೈದ್ಯಕೀಯ ಸೀಟುಗಳನ್ನು ಪಡೆದ ಎಲ್ಲಾ ವಿದ್ಯಾರ್ಥಿಗಳು ಸಕಾಲದಲ್ಲಿ ಶೈಕ್ಷಣಿಕ ಶುಲ್ಕವನ್ನು ಪಾವತಿ ಮಾಡಿ ಪ್ರವೇಶವನ್ನು ಪಡೆದಿರುತ್ತಾರೆಯೇ ;

(ಇ) ಮೆರಿಟ್ ಆಧಾರಿತ ವೈದ್ಯಕೀಯ ಸೀಟುಗಳನ್ನು ತುಂಬುವ ವೇಳೆ ರಜಾ ದಿನಗಳಲ್ಲಿ ಶೈಕ್ಷಣಿಕ ಶುಲ್ಕವನ್ನು ಬ್ಯಾಂಕಿನ ಡಿ.ಡಿ. ಮೂಲಕ ಪಾವತಿ ಮಾಡಲು ಸಿ.ಇ.ಟಿ ಅಧಿಕಾರಿಗಳು ಆದೇಶ ನೀಡಿರುತ್ತಾರೆಯೇ ; ನಿಗಧಿತ ಸಮಯದಲ್ಲಿ ಶೈಕ್ಷಣಿಕ ಶುಲ್ಕ ಪಾವತಿ ಮಾಡಿಲ್ಲದ ಕಾರಣಕ್ಕೆ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಸೀಟುಗಳು ನೀಡಿರುವುದಿಲ್ಲ ;

(ಈ) ಶೈಕ್ಷಣಿಕ ಶುಲ್ಕದ ಬ್ಯಾಂಕಿನ ಡಿ.ಡಿ. ಪಡೆಯುವಲ್ಲಿ ಸಿ.ಇ.ಟಿ ಅಧಿಕಾರಿಗಳು ತಪ್ಪು ಮಾಡಿರುವ ಕುರಿತು ರಾಜ್ಯ ಸರ್ಕಾರಕ್ಕೆ ದೂರು ಬಂದಿರುತ್ತವೆಯೇ ; ಬಂದಿದ್ದ ಪಕ್ಷದಲ್ಲಿ ರಾಜ್ಯ ಸರ್ಕಾರ ಇವುಗಳ ಮೇಲೆ ಯಾವ ಕ್ರಮ ಕೈಗೊಂಡಿರುತ್ತದೆ ?

## ಮೀಸಲಾತಿ ಪ್ರಮಾಣ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೦೬೫ (೩೬೩೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಸರ್ಕಾರವು ಎಷ್ಟು ಪ್ರಮಾಣದ ಶೇಕಡವಾರು ಮೀಸಲಾತಿಯನ್ನು ಜಾತಿ ಮತ್ತು ಜನಾಂಗಗಳಿಗೆ ನೀಡಿರುತ್ತದೆ ;

(ಆ) ಸರ್ಕಾರವು ಕರ್ನಾಟಕ ರಾಜ್ಯದಲ್ಲಿ ವಿವಿಧ ಜಾತಿ ಮತ್ತು ಜನಾಂಗಗಳಿಗೆ ನೀಡಿರುವ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿರುತ್ತದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದವರೆಗೆ ಮೀಸಲಾತಿ ಪ್ರಮಾಣವನ್ನು ಹೆಚ್ಚು ಮಾಡಲಾಗುತ್ತದೆ ಮತ್ತು ಇಂತಹ ಮೀಸಲಾತಿ ಪ್ರಮಾಣದ ಹೆಚ್ಚಳವು ಸರ್ವೋಚ್ಚ ನ್ಯಾಯಾಲಯದ ತೀರ್ಪುಗಳಿಗೆ ಅನುಗುಣವಾಗಿ ಇರುತ್ತದೆಯೇ ;

(ಇ) ಸರ್ಕಾರವು ಕಳೆದ ೨ ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಮುಖಾಂತರ ಯಾವ ಯಾವ ಜಾತಿ ಮತ್ತು ಜನಾಂಗಗಳಿಗೆ ಅನುದಾನವನ್ನು ನೀಡಿರುತ್ತದೆ ; ಅವುಗಳ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗಂಗಾ ಕಲ್ಯಾಣ ಯೋಜನೆಯಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಎಷ್ಟು ಫಲಾನುಭವಿಗಳಿಗಾಗಿ ನೀಡಲಾಗಿದೆ ; ನಿಯಮಾವಳಿಗಳನ್ನು ಹಂಚಿಕೆಯ ಸಮಯದಲ್ಲಿ ಪಾಲಿಸಲಾಗಿದೆಯೇ ? (ಪೂರ್ಣವಿವರ ನೀಡುವುದು)

**ಕೆ.ಆರ್.ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0194/700 ಪ್ರತಿಗಳು/07–11–2017